ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 82 | ರಾಯಚೂರು Raichur | 14-09-2026 | ಸೋಮವಾರ Monday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685




# ಗಣೇಶೋತ್ಸವದ ಹೆಸರಿನಲ್ಲಿ ಬಿಜೆಪಿ ಕೋಮು ಪ್ರಚೋದನೆಗೆ ಯತ್ನ: ಡಿ.ಕೆ.ಶಿ ಆರೋಪ

ಬೆಂಗಳೂರು: ಗಣೇಶೋತ್ಸವದ ಹೆಸರಿನಲ್ಲಿ ಬಿಜೆಪಿ ಕೋಮು ಪ್ರಚೋದನೆ ನಡೆಸಿ ಸಮಾಜದಲ್ಲಿ ಅಶಾಂತಿ ಸೃಷ್ಟಿಸಲು ಪ್ರಯತ್ನಿಸುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭಾನುವಾರ ಆರೋಪಿಸಿದರು. ರಾಜ್ಯ ಸರ್ಕಾರ ಗಣೇಶೋತ್ಸವ ಆಚರಣೆಗೆ ಯಾವುದೇ ಅನಗತ್ಯ ನಿರ್ಬಂಧಗಳನ್ನು ವಿಧಿಸಿಲ್ಲ. ಹಬ್ಬವನ್ನು ಶಾಂತಿಯುತವಾಗಿ, ಭಕ್ತಿಭಾವದಿಂದ ಮತ್ತು ಸಾರ್ವಜನಿಕರಿಗೆ ತೊಂದರೆಯಾಗದ ರೀತಿಯಲ್ಲಿ ಆಚರಿಸಬೇಕು ಎಂಬುದಷ್ಟೇ ಸರ್ಕಾರದ ನಿಲುವು ಎಂದು ಅವರು ಸ್ಪಷ್ಟಪಡಿಸಿದರು.



ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಣೇಶೋತ್ಸವ ಆಚರಣೆಗಳ ಮೇಲೆ ಸರ್ಕಾರ ಹಲವು ನಿರ್ಬಂಧಗಳನ್ನು ವಿಧಿಸಿದೆ ಎಂಬ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರ ಆರೋಪಕ್ಕೆ ಪ್ರತಿಕ್ರಿಯಿಸಿದರು.

"ಗಣೇಶ ಬಿಜೆಪಿಯ ಆಸ್ತಿಯಲ್ಲ. ಗಣೇಶೋತ್ಸವವು ಎಲ್ಲರಿಗೂ ಸೇರಿದ ಹಬ್ಬವಾಗಿದೆ. ಸಾರ್ವಜನಿಕ ಗಣೇಶೋತ್ಸವದ ಪರಂಪರೆಯನ್ನು ಬಾಲಗಂಗಾಧರ ತಿಲಕ್ ಅವರು ಆರಂಭಿಸಿದ್ದು, ಅದನ್ನು ಜನರು ಹಲವು ವರ್ಷಗಳಿಂದ ಭಕ್ತಿಭಾವದಿಂದ ಆಚರಿಸಿಕೊಂಡು ಬರುತ್ತಿದ್ದಾರೆ. ನಮ್ಮ ಸರ್ಕಾರವೂ ಹಬ್ಬಕ್ಕೆ ರಜೆ ಘೋಷಿಸಿ ಜನರು ಸಂಭ್ರಮದಿಂದ ಆಚರಿಸಲು ಅವಕಾಶ ನೀಡಿದೆ" ಎಂದು ಹೇಳಿದರು.

ಗಣೇಶೋತ್ಸವವನ್ನು ರಾಜಕೀಯ ಉದ್ದೇಶಗಳಿಗೆ ಬಳಸಿಕೊಳ್ಳಬಾರದು. ಧಾರ್ಮಿಕ ಆಚರಣೆಗಳನ್ನು ಸಮಾಜದಲ್ಲಿ ಭಿನ್ನಾಭಿಪ್ರಾಯ ಅಥವಾ ಉದ್ವಿಗ್ನತೆ ಸೃಷ್ಟಿಸುವ ವೇದಿಕೆಯನ್ನಾಗಿ ಮಾಡಬಾರದು. ಮೆರವಣಿಗೆ, ಧ್ವನಿವರ್ಧಕ ಬಳಕೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿ ಕಾನೂನು ಮತ್ತು ಶಿಸ್ತನ್ನು ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಬಿಜೆಪಿ ಕೆಲವು ಕಡೆಗಳಲ್ಲಿ ಸಮಾಜ ವಿರೋಧಿ ಶಕ್ತಿಗಳನ್ನು ಬಳಸಿಕೊಂಡು ಕೋಮು ಉದ್ವಿಗ್ನತೆ ಸೃಷ್ಟಿಸಲು ಯತ್ನಿಸುತ್ತಿದೆ ಎಂದು ಆರೋಪಿಸಿದ ಅವರು, ಇಂತಹ ಚಟುವಟಿಕೆಗಳ ಬಗ್ಗೆ ಪೊಲೀಸರು ಎಚ್ಚರಿಕೆಯಿಂದ ಇರಲು ಸೂಚಿಸಲಾಗಿದೆ ಎಂದು ತಿಳಿಸಿದರು. ಯಾವುದೇ ಸಮುದಾಯದ ಭಾವನೆಗಳಿಗೆ ಧಕ್ಕೆ ಉಂಟುಮಾಡುವ ಅಥವಾ ಶಾಂತಿ ಸುವ್ಯವಸ್ಥೆಗೆ ಭಂಗ ತರುವ ಕೃತ್ಯಗಳಿಗೆ ಅವಕಾಶ ನೀಡುವುದಿಲ್ಲ ಎಂದರು.

ಗಣೇಶ ಮೆರವಣಿಗೆ ವೇಳೆ ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡಬೇಕು. ವಿಶೇಷವಾಗಿ ವಿದ್ಯುತ್ ಕಂಬಗಳು, ತಂತಿಗಳು ಹಾಗೂ ಇತರೆ ಅಪಾಯಕಾರಿಯಾದ ಸ್ಥಳಗಳ ಬಳಿ ಹೆಚ್ಚಿನ ಮುನ್ನೆಚ್ಚರಿಕೆ ವಹಿಸಬೇಕು. ಮೆರವಣಿಗೆ ಆಯೋಜಕರು ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಸಲಹೆ ನೀಡಿದರು.

ಮೆರವಣಿಗೆ ಮಾರ್ಗಗಳಲ್ಲಿ ವಾಹನ ಸಂಚಾರ, ಜನಸಂದಣಿ ನಿಯಂತ್ರಣ ಹಾಗೂ ತುರ್ತು ಪರಿಸ್ಥಿತಿಗಳನ್ನು ನಿಭಾಯಿಸಲು ಆಯೋಜಕರು ಮತ್ತು ಪೊಲೀಸ್ ಇಲಾಖೆ ಪರಸ್ಪರ ಸಹಕಾರದಿಂದ ಕಾರ್ಯನಿರ್ವಹಿಸಬೇಕು. ಹಬ್ಬದ ಸಂಭ್ರಮದಲ್ಲಿ ಸಾರ್ವಜನಿಕರ ಸುರಕ್ಷತೆ ಹಾಗೂ ಕಾನೂನು ಸುವ್ಯವಸ್ಥೆಯನ್ನು ಕಡೆಗಣಿಸಬಾರದು ಎಂದು ಹೇಳಿದರು.

ಟಿ. ನರಸೀಪುರ ಪೊಲೀಸ್ ಠಾಣೆ ಮುಂದೆ ಬಿಜೆಪಿ ನಡೆಸಿದ ಪ್ರತಿಭಟನೆ ಕುರಿತು ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಯಾವುದೇ ವಿವಾದವಿಲ್ಲದ ಸ್ಥಳಗಳಲ್ಲಿಯೂ ರಾಜಕೀಯ ಕಾರಣಕ್ಕಾಗಿ ವಿವಾದ ಸೃಷ್ಟಿಸುವ ಪ್ರಯತ್ನ ನಡೆಯುತ್ತಿದೆ ಎಂದು ಟೀಕಿಸಿದರು.

"ಸರ್ಕಾರಕ್ಕೆ ಯಾವುದೇ ಧಾರ್ಮಿಕ ಹಬ್ಬದ ವಿರುದ್ಧ ವಿರೋಧವಿಲ್ಲ. ಜನರು ತಮ್ಮ ನಂಬಿಕೆ ಮತ್ತು ಸಂಪ್ರದಾಯದಂತೆ ಹಬ್ಬ ಆಚರಿಸಲು ಸಂಪೂರ್ಣ ಸ್ವಾತಂತ್ರ್ಯ ಹೊಂದಿದ್ದಾರೆ. ಆದರೆ ಕಾನೂನು ಮತ್ತು ಸಾರ್ವಜನಿಕ ಶಾಂತಿ ಕಾಪಾಡುವುದು ಎಲ್ಲರ ಹೊಣೆಗಾರಿಕೆ. ಯಾರೇ ಆಗಲಿ ಕಾನೂನು ಕೈಗೆತ್ತಿಕೊಂಡರೆ ಕ್ರಮ ಕೈಗೊಳ್ಳಲಾಗುತ್ತದೆ" ಎಂದು ಎಚ್ಚರಿಸಿದರು.

ಗಣೇಶೋತ್ಸವವನ್ನು ರಾಜಕೀಯ ಸಂಘರ್ಷದ ವಿಷಯವನ್ನಾಗಿ ಮಾಡದೆ, ಸಾಮರಸ್ಯ ಮತ್ತು ಸೌಹಾರ್ದತೆಯನ್ನು ಹೆಚ್ಚಿಸುವ ಹಬ್ಬವಾಗಿ ಆಚರಿಸಬೇಕು. ರಾಜ್ಯದ ಜನರು ಯಾವುದೇ ಪ್ರಚೋದನೆಗೆ ಒಳಗಾಗದೆ ಶಾಂತಿ ಹಾಗೂ ಸಹೋದರತ್ವದ ವಾತಾವರಣದಲ್ಲಿ ಗಣೇಶೋತ್ಸವ ಆಚರಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ ಮಾಡಿದರು.

## ಆಧ್ಯಾತ್ಮಿಕತೆ ಗಾಳಿ, ನೀರು, ಅನ್ನದಷ್ಟೇ ಮುಖ್ಯ: ಶಾಸಕ ಬಸನಗೌಡ ದದ್ದಲ್

ರಾಯಚೂರು: ಇಂದಿನ ಸಮಾಜದಲ್ಲಿ ಮನುಷ್ಯನಿಗೆ ಗಾಳಿ, ನೀರು ಮತ್ತು ಅನ್ನ ಎಷ್ಟು ಮುಖ್ಯವೋ, ಆಧ್ಯಾತ್ಮಿಕತೆಯೂ ಅಷ್ಟೇ ಮುಖ್ಯವಾಗಿದೆ ಎಂದು ರಾಯಚೂರು ಗ್ರಾಮಾಂತರ ಶಾಸಕ ಬಸನಗೌಡ ದದ್ದಲ್ ಹೇಳಿದರು.



ನಗರದ ಕಿಲ್ಲೆ ಬೃಹನ್ಮಠದಲ್ಲಿ ಒಂದು ತಿಂಗಳ ಪರ್ಯಂತ ಹಮ್ಮಿಕೊಂಡಿದ್ದ 102ನೇ ವರ್ಷದ ಶ್ರಾವಣ ಮಾಸದ ಅಂಗವಾಗಿ ನಡೆದ ಸಂತ ಶಿಶುನಾಳ ಶರೀಫರ ಜೀವನದರ್ಶನ ಪ್ರವಚನದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಶ್ರೀಮಠದ ಪೀಠಾಧಿಪತಿ ಪೂಜ್ಯ ಶ್ರೀ ಶಾಂತಮಲ್ಲ ಶಿವಾಚಾರ್ಯರು, ಗಬ್ಬೂರಿನ ಪೂಜ್ಯ ಶ್ರೀ ಬೂದಿ ಬಸವ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಪೂಜ್ಯ ಶ್ರೀ ಶಂಭು ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಲಾಯಿತು.

ಪುರಾಣ, ಪುಣ್ಯಕಥೆ ಹಾಗೂ ಪ್ರವಚನಗಳನ್ನು ಶ್ರವಣ ಮಾಡುವುದರಿಂದ ಮನುಷ್ಯನಲ್ಲಿರುವ ಕೆಟ್ಟ ಚಿಂತನೆಗಳು ದೂರವಾಗಿ ಮನಸ್ಸು ಶಾಂತಗೊಳ್ಳುತ್ತದೆ. ಮನಸ್ಸಿನ ಅಂಧಕಾರವನ್ನು ದೂರಮಾಡಿ ಸನ್ಮಾರ್ಗದಲ್ಲಿ ನಡೆಸುವ ಶಕ್ತಿ ಗುರುಗಳಲ್ಲಿದೆ ಎಂದು ಶಾಸಕ ಬಸನಗೌಡ ದದ್ದಲ್ ಹೇಳಿದರು.

ಈ ವರ್ಷ ತೀವ್ರ ಬರಗಾಲ ಎದುರಾಗಿದ್ದು, ರೈತರು ಬೆಳೆದ ಬೆಳೆಗಳು ಒಣಗಿ ಸಂಕಷ್ಟಕ್ಕೆ ಸಿಲುಕಿದ್ದಾರೆ. ಪೂಜ್ಯರು ತಮ್ಮ ಇಷ್ಟಲಿಂಗ ಪೂಜೆ ಹಾಗೂ ಪ್ರಾರ್ಥನೆಯ ಸಂದರ್ಭದಲ್ಲಿ ಉತ್ತಮ ಮಳೆಗಾಗಿ ಭಗವಂತನಲ್ಲಿ ಪ್ರಾರ್ಥಿಸಬೇಕು. ರೈತರ ಮುಖದಲ್ಲಿ ಮತ್ತೆ ಮಂದಹಾಸ ಮೂಡುವಂತಾಗಲಿ ಎಂದು ಆಶಿಸಿದರು.

ಶ್ರೀಮಠವು ವರ್ಷಪೂರ್ತಿ ಆಧ್ಯಾತ್ಮಿಕ ಕಾರ್ಯಕ್ರಮಗಳ ಜೊತೆಗೆ ಹೊಸ ಪ್ರತಿಭೆಗಳನ್ನು ಗುರುತಿಸಿ ಅವರಿಗೆ ವೇದಿಕೆ ಕಲ್ಪಿಸುತ್ತಿರುವುದು 2ನೇ ಪುಟಕ್ಕೆ

## 7ನೇ ಸಣ್ಣ ನೀರಾವರಿ ಹಾಗೂ 2ನೇ ಜಲಮೂಲಗಳ ಗಣತಿ ಕ್ಷೇತ್ರಕಾರ್ಯ ಪೂರ್ಣ

ಬೆಂಗಳೂರು, ಸೆ.13: ರಾಜ್ಯದ ಜಲಸಂಪನ್ಮೂಲಗಳ ವಾಸ್ತವ ಸ್ಥಿತಿಗತಿಯನ್ನು ಅರಿತು, ಭವಿಷ್ಯದ ನೀರಾವರಿ ಹಾಗೂ ಜಲಸಂರಕ್ಷಣಾ ಯೋಜನೆಗಳನ್ನು ವೈಜ್ಞಾನಿಕವಾಗಿ ರೂಪಿಸುವ ಉದ್ದೇಶದಿಂದ ಕೈಗೊಂಡ 7ನೇ ಸಣ್ಣ ನೀರಾವರಿ ಗಣತಿ ಹಾಗೂ 2ನೇ ಜಲಮೂಲಗಳ ಗಣತಿಯ ಕ್ಷೇತ್ರಕಾರ್ಯವನ್ನು ಕರ್ನಾಟಕ ಯಶಸ್ವಿಯಾಗಿ ಪೂರ್ಣಗೊಳಿಸಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರ್ಮಸಿಂಗ್ ತಿಳಿಸಿದ್ದಾರೆ.



ಗಣತಿಯಲ್ಲಿ ರಾಜ್ಯದ 14,18,894 ಅಂತರ್ಜಲ ಯೋಜನೆಗಳು, 77,573 ಮೇಲ್ಮೈ ಜಲ ಯೋಜನೆಗಳು ಹಾಗೂ 38,960 ಜಲಮೂಲಗಳನ್ನು ದಾಖಲಿಸಲಾಗಿದೆ. ಕೇಂದ್ರ ಸರ್ಕಾರದ ಜಲಶಕ್ತಿ ಸಚಿವಾಲಯದ ಸಂಪೂರ್ಣ ಆರ್ಥಿಕ ನೆರವಿನೊಂದಿಗೆ 2023-24ನೇ ಸಾಲನ್ನು ಆಧಾರ ವರ್ಷವನ್ನಾಗಿಟ್ಟುಕೊಂಡು ಕೈಗೊಂಡ ಈ ಬೃಹತ್ ಗಣತಿಯ ಕ್ಷೇತ್ರಕಾರ್ಯವು 2026ರ ಆಗಸ್ಟ್‌ನಲ್ಲಿ ಪೂರ್ಣಗೊಂಡಿದೆ.

ರಾಜ್ಯದ 30,671 ಗ್ರಾಮಗಳು, 300 ನಗರ ಸ್ಥಳೀಯ ಸಂಸ್ಥೆಗಳು ಹಾಗೂ 7,128 ನಗರ ವಾರ್ಡ್‌ಗಳನ್ನು ಗಣತಿ ವ್ಯಾಪ್ತಿಗೆ ಒಳಪಡಿಸಲಾಗಿತ್ತು. ಗಣತಿ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಕಾರ್ಯವನ್ನು ಶ್ಲಾಘಿಸಿದ ಸಚಿವರು, ಉತ್ತಮವಾಗಿ ಕಾರ್ಯನಿರ್ವಹಿಸಿದ ಅಧಿಕಾರಿಗಳಿಗೆ ಪ್ರಶಂಸಾ ಪತ್ರಗಳನ್ನು ನೀಡಿ ಗೌರವಿಸಿದರು.

ರಾಜ್ಯ ಎದುರಿಸುತ್ತಿರುವ ಬರ, ಅಂತರ್ಜಲ ಕುಸಿತ ಹಾಗೂ ಹವಾಮಾನ ಬದಲಾವಣೆಯ ಸವಾಲುಗಳ ಸಂದರ್ಭದಲ್ಲಿ ನಿಖರವಾದ ಜಲ ದತ್ತಾಂಶ ಅತ್ಯಂತ ಮಹತ್ವದ್ದಾಗಿದೆ. ಯಾವ ಪ್ರದೇಶದಲ್ಲಿ ಎಷ್ಟು 2ನೇ ಪುಟಕ್ಕೆ

## ಗಣೇಶೋತ್ಸವ ಬಂದೋಬಸ್ತ್‌ಗೆ ಪೊಲೀಸ್ ಇಲಾಖೆ ಸಜ್ಜು: ಅಧಿಕಾರಿಗಳಿಗೆ ಎಸ್‌ಪಿ ಅರುಣಾಂಗ್ಶು ಗಿರಿ ಸೂಚನೆ, ಸಿಂಧನೂರಿನಲ್ಲಿ ರೂಟ್ ಮಾರ್ಚ್

ರಾಯಚೂರು, ಸೆ.13: ಮುಂಬರುವ ಗಣೇಶೋತ್ಸವವನ್ನು ಜಿಲ್ಲೆಯಲ್ಲಿ ಶಾಂತಿಯುತವಾಗಿ, ಸೌಹಾರ್ದಯುತವಾಗಿ ಹಾಗೂ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಆಚರಿಸುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಭದ್ರತಾ ಸಿದ್ಧತೆಗಳನ್ನು ಮತ್ತಷ್ಟು ಬಿಗಿಗೊಳಿಸಿದೆ. ಇದರ ಅಂಗವಾಗಿ ರಾಯಚೂರು ನಗರದ ಗ್ರೀನ್ ಪ್ಯಾಲೆಸ್‌ನಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕ ಅರುಣಾಂಗ್ಶು ಗಿರಿ ಐಪಿಎಸ್ ಅವರು ರಾಯಚೂರು ಉಪವಿಭಾಗದ ಎಲ್ಲಾ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯೊಂದಿಗೆ ಸಭೆ ನಡೆಸಿ, ಗಣೇಶೋತ್ಸವ ಬಂದೋಬಸ್ತ್ ಕುರಿತಂತೆ ಅಗತ್ಯ ಸಲಹೆಸೂಚನೆಗಳನ್ನು ನೀಡಿದರು.





ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ, ಮೆರವಣಿಗೆ ಹಾಗೂ ವಿಸರ್ಜನೆ ಸಂದರ್ಭದಲ್ಲಿ ಸಾರ್ವಜನಿಕರ ಸುರಕ್ಷತೆ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವುದು ಅತ್ಯಂತ ಮುಖ್ಯವಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಸೂಕ್ಷ್ಮ ಪ್ರದೇಶಗಳು, ಪ್ರಮುಖ ವೃತ್ತಗಳು, ಜನನಿಬಿಡ ಸ್ಥಳಗಳು ಹಾಗೂ ಮೆರವಣಿಗೆ ಮಾರ್ಗಗಳ ಬಗ್ಗೆ ವಿಶೇಷ ನಿಗಾ ವಹಿಸುವಂತೆ ಸೂಚಿಸಲಾಯಿತು.

ಹಬ್ಬದ ಸಂದರ್ಭದಲ್ಲಿ ಎಲ್ಲ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ, ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು. ಗಣೇಶ ಮಂಡಳಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಮೆರವಣಿಗೆ ಮತ್ತು ವಿಸರ್ಜನೆಗಳು ನಿಗದಿತ ಮಾರ್ಗದಲ್ಲೇ ಸುಗಮವಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಎಸ್‌ಪಿ ಅರುಣಾಂಗ್ಶು ಗಿರಿ ಸೂಚಿಸಿದರು.

ಜನಸಂದಣಿ ಹೆಚ್ಚಾಗುವ ಪ್ರದೇಶಗಳಲ್ಲಿ ಹೆಚ್ಚುವರಿ ಬಂದೋಬಸ್ತ್ ವ್ಯವಸ್ಥೆ, ಸಂಚಾರ ನಿಯಂತ್ರಣ ಹಾಗೂ ಅಗತ್ಯ ಪೊಲೀಸ್ ಸಿಬ್ಬಂದಿ ನಿಯೋಜನೆಗೆ ಆದ್ಯತೆ ನೀಡಬೇಕು. ಯಾವುದೇ ಅನುಮಾನಾಸ್ಪದ ಚಟುವಟಿಕೆಗಳು ಕಂಡುಬಂದಲ್ಲಿ ತಕ್ಷಣ ಮೇಲಧಿಕಾರಿಗಳ ಗಮನಕ್ಕೆ ತಂದು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಲಾಯಿತು.

ಇದೇ ದಿನ ಸಿಂಧನೂರು ನಗರದಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕ 2ನೇ ಪುಟಕ್ಕೆ

## ಜಿಲ್ಲಾ 12ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸ್ವಾಗತ ಸಮಿತಿ ರಚನೆ

ರಾಯಚೂರು, ಸೆ.13: ರಾಯಚೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಅಕ್ಟೋಬರ್ 24 ಮತ್ತು 25ರಂದು ನಡೆಯಲಿರುವ ರಾಯಚೂರು ಜಿಲ್ಲಾ 12ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಸ್ವಾಗತ ಸಮಿತಿಯನ್ನು ರಚಿಸಲಾಗಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ರಂಗಣ್ಣ ಪಾಟೀಲ ಅಳ್ಳುಂಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಸ್ವಾಗತ ಸಮಿತಿಯ ಗೌರವಾಧ್ಯಕ್ಷರಾಗಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರನ್ನು ಆಯ್ಕೆ ಮಾಡಲಾಗಿದೆ.

ಸ್ವಾಗತ ಸಮಿತಿಯ ಅಧ್ಯಕ್ಷರಾಗಿ ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಅವರನ್ನು ಆಯ್ಕೆ ಮಾಡಲಾಗಿದ್ದು, ಕಾರ್ಯಾಧ್ಯಕ್ಷರಾಗಿ ರಾಯಚೂರು ನಗರ ಶಾಸಕ ಡಾ. ಎಸ್. ಶಿವರಾಜ ಪಾಟೀಲ್, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ರಾಯಚೂರು ಗ್ರಾಮಾಂತರ ಶಾಸಕ ಬಸನಗೌಡ ದದ್ದಲ್ ಮತ್ತು ಮಾಜಿ ಶಾಸಕ, ಸಾಂಸ್ಕೃತಿಕ ಸಂಘಟಕ ಎ. ಪಾಪಾರೆಡ್ಡಿ ಅವರನ್ನು ಆಯ್ಕೆ ಮಾಡಲಾಗಿದೆ.

ಉಪಾಧ್ಯಕ್ಷರಾಗಿ ರಾಯಚೂರು ಸಂಸದ ಜಿ. ಕುಮಾರ ನಾಯಕ, ಕೊಪ್ಪಳ ಸಂಸದ ಕೆ. ರಾಜಶೇಖರ ಹಿಟ್ನಾಳ, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷ ಹಾಗೂ ಮಸ್ಕಿ ಶಾಸಕ ಆರ್. ಬಸನಗೌಡ ತುರವಿಹಾಳ, ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ, ಮಾನ್ವಿ ಶಾಸಕ ಜಿ. ಹಂಪಯ್ಯ ನಾಯಕ, ಲಿಂಗಸುಗೂರು ಶಾಸಕ ಮಾನಪ್ಪ ಡಿ. ವಜ್ಜಲ್, ದೇವದುರ್ಗ ಶಾಸಕಿ ಕರೆಮ್ಮ ಜಿ. ನಾಯಕ, ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿ. ನಮೋಶಿ, ಡಾ. ಚಂದ್ರಶೇಖರ ಬಿ. ಪಾಟೀಲ್, ಶರಣಗೌಡ ಪಾಟೀಲ್ ಬಯ್ಯಾಪೂರ, ಎ. ವಸಂತಕುಮಾರ, ಬಸನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ಕಂಪನಿ ಅಧ್ಯಕ್ಷ ಜೆ.ಟಿ. ಪಾಟೀಲ್, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪಾಮಯ್ಯ ಮುರಾರಿ ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪವನ್ ಕಿಶೋರ್ ಪಾಟೀಲ್ ಅವರನ್ನು ಆಯ್ಕೆ ಮಾಡಲಾಗಿದೆ.

ಪ್ರಧಾನ ಕಾರ್ಯದರ್ಶಿಯಾಗಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ರಂಗಣ್ಣ ಪಾಟೀಲ ಅಳ್ಳುಂಡಿ, ಕಾರ್ಯದರ್ಶಿಗಳಾಗಿ ಜಿಲ್ಲಾ ಕಸಾಪ ಕಾರ್ಯದರ್ಶಿಗಳಾದ ತಾಯಪ್ಪ ಬಿ. ಹೊಸೂರು ಮತ್ತು ಮಂಜುನಾಥ ಕಾಮೀನ್ ಅವರನ್ನು ಆಯ್ಕೆ ಮಾಡಲಾಗಿದೆ.

ಸಹ ಕಾರ್ಯದರ್ಶಿಗಳಾಗಿ 2ನೇ ಪುಟಕ್ಕೆ

## ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಕ್ಕೆ ನೂತನ ತಾತ್ಕಾಲಿಕ ಸಮಿತಿ

ರಾಯಚೂರು, ಸೆ.13: ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ (ರಿ), ಬೆಂಗಳೂರು ಇದರ ರಾಯಚೂರು ತಾಲೂಕು ಶಾಖೆಗೆ ನೂತನ ತಾತ್ಕಾಲಿಕ (ಅಡ್‌ಹಾಕ್) ಸಮಿತಿಯನ್ನು ರಚಿಸಲಾಗಿದ್ದು, ರಾಜ್ಯಾಧ್ಯಕ್ಷ ಚಂದ್ರಶೇಖರ್ ನುಗ್ಗಲಿ ಹಾಗೂ ಪ್ರಧಾನ ಕಾರ್ಯದರ್ಶಿ ಚೇತನ್ ಎಚ್.ಎಸ್. ಅವರು ಆದೇಶ ಹೊರಡಿಸಿದ್ದಾರೆ. ಅದರಂತೆ ನೂತನ ಪದಾಧಿಕಾರಿಗಳು ಅಧಿಕೃತವಾಗಿ ಅಧಿಕಾರ ವಹಿಸಿಕೊಂಡಿದ್ದೇವೆ ಎಂದು ಸಂಘದ ತಾಲೂಕು ಅಧ್ಯಕ್ಷ ಕೆ. ರಾಮು ಗಾಣದಾಳ್ ತಿಳಿಸಿದರು.



ನಗರದ ಪತ್ರಿಕಾಭವನದಲ್ಲಿ ಭಾನುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2031ರ ಅವಧಿಯ ಸಾರ್ವತ್ರಿಕ ಚುನಾವಣಾ ಪ್ರಕ್ರಿಯೆ ನಡೆಯುತ್ತಿದ್ದು, ರಾಯಚೂರು ತಾಲೂಕು ಚುನಾವಣಾ ಫಲಿತಾಂಶವು ಹೈಕೋರ್ಟ್‌ನ ಮಧ್ಯಂತರ ಆದೇಶದ ಹಿನ್ನೆಲೆಯಲ್ಲಿ ಪ್ರಕಟವಾಗಿರಲಿಲ್ಲ. ದಿನಾಂಕ 1-7-2026ರಂದು ಸಂಬಂಧಿತ ರಿಟ್ ಅರ್ಜಿ ವಿತ್‌ಡ್ರಾನ್ ಆಗಿ ವಜಾಗೊಂಡಿರುವ ಹಿನ್ನೆಲೆಯಲ್ಲಿ, ಆಡಳಿತಾತ್ಮಕ ಅಗತ್ಯತೆಯನ್ನು ಪರಿಗಣಿಸಿ ತಾತ್ಕಾಲಿಕ ಸಮಿತಿ ರಚಿಸಲಾಗಿದೆ ಎಂದರು.

ತಾಲೂಕಿನಲ್ಲಿ ಅಧಿಕೃತ ಪದಾಧಿಕಾರಿಗಳಿಲ್ಲದ ಕಾರಣ ಸಂಘದ ದೈನಂದಿನ ಆಡಳಿತ, ಹಣಕಾಸು ವ್ಯವಹಾರ, ಸದಸ್ಯತ್ವ ಸಂಬಂಧಿತ ದಾಖಲೆಗಳ ನಿರ್ವಹಣೆ ಹಾಗೂ ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕೆ ತೊಂದರೆಯಾಗುತ್ತಿತ್ತು. ಈ ಹಿನ್ನೆಲೆಯಲ್ಲಿ ಸಂಘಟನೆಯ ಕಾರ್ಯಚಟುವಟಿಕೆ ನಿರಂತರವಾಗಿರಲು ತಾತ್ಕಾಲಿಕ ಸಮಿತಿ ಅವಶ್ಯಕವಾಗಿತ್ತು ಎಂದು ಹೇಳಿದರು.

ವಿಶೇಷವಾಗಿ ಸೆಪ್ಟೆಂಬರ್ 5ರಂದು ನಡೆಯುವ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ರಾಯಚೂರು ತಾಲೂಕಿನ ಪ್ರಾತಿನಿಧ್ಯ ಇರಬೇಕಾದ ಅಗತ್ಯವಿದ್ದ ಹಿನ್ನೆಲೆ, ತಾತ್ಕಾಲಿಕ ಸಮಿತಿಯನ್ನು ರಚಿಸಲಾಗಿದೆ ಎಂದು ತಿಳಿಸಿದರು.

ಸಂಘದ ಬೈಲಾ ನಿಯಮ 16(ಎಲ್), 6(ಎಲ್), 23(ಬಿ) ಹಾಗೂ 25(ಎಚ್) ರನ್ವಯ ಸಮಿತಿ ರಚಿಸಲಾಗಿದ್ದು, ಮುಂದಿನ ಕಾನೂನುಬದ್ಧ ಚುನಾವಣೆಯವರೆಗೆ ಮಾತ್ರ ಈ ಸಮಿತಿ ಕಾರ್ಯನಿರ್ವಹಿಸಲಿದೆ ಎಂದರು.

ನೂತನ ಸಮಿತಿಯ ಅಧ್ಯಕ್ಷರಾಗಿ ರಾಮು (ಶ್ರೀನಿವಾಸ ನಗರ ಕ್ಯಾಂಪ್), ಕಾರ್ಯದರ್ಶಿಯಾಗಿ ಆನಂದಕುಮಾರ (ಸ.ಮಾ.ಹಿ.ಪ್ರಾ.ಶಾ., ಜೇಗರಕಲ್), ಖಜಾಂಚಿಯಾಗಿ ನೂರ್ ಉಲ್ ಹಕ್ (ಪರಕೋಟಿ), ಗೌರವಾಧ್ಯಕ್ಷರಾಗಿ ರಂಗನಾಥ, ಉಪಾಧ್ಯಕ್ಷರಾಗಿ 2ನೇ ಪುಟಕ್ಕೆ

## ಗಜಾನನ ಯುವಕ ಮಂಡಳಿಯಿಂದ ಇಂದಿನಿಂದ ಸೆ. 20ರವರೆಗೆ ಅದ್ದೂರಿ ಗಣೇಶೋತ್ಸವ

ರಾಯಚೂರು, ಸೆ.13: ನಗರದ ಸಾಯಿಬಾಬಾ ಕಾಲೋನಿ ರಾಂಪುರದಲ್ಲಿ ಶ್ರೀ ಗಜಾನನ ಯುವಕ ಮಂಡಳಿ ವತಿಯಿಂದ ಸೆ.14ರಿಂದ 20ರವರೆಗೆ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳೊಂದಿಗೆ ಗಣೇಶೋತ್ಸವವನ್ನು ವೈಭವದಿಂದ ಆಚರಿಸಲಾಗುತ್ತಿದೆ ಎಂದು ಮಂಡಳಿಯ ಸದಸ್ಯ ರೋಹಿತ್ ತಿಳಿಸಿದರು.



ನಗರದ ಪತ್ರಿಕಾ ಭವನದಲ್ಲಿ ಭಾನುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇಂದು ಗಣೇಶ ಮೂರ್ತಿ ಪ್ರತಿಷ್ಠಾಪನೆಯೊಂದಿಗೆ ಉತ್ಸವಕ್ಕೆ ಚಾಲನೆ ನೀಡಲಾಗುವುದು. ಸೆ.15ರಂದು ರಂಗೋಲಿ ಸ್ಪರ್ಧೆ ಆಯೋಜಿಸಲಾಗಿದ್ದು, ಸೆ.16ರಂದು ನೃತ್ಯ ವೈಭವ ಕಾರ್ಯಕ್ರಮ ನಡೆಯಲಿದೆ. ಈ ಸಂದರ್ಭದಲ್ಲಿ ಕರ್ನಾಟಕ ಕಲಾತಂಡದಿಂದ ನೃತ್ಯ ಪ್ರದರ್ಶನ ಹಾಗೂ ರಾಘವೇಂದ್ರ ಆಚಾರಿ ಅವರಿಂದ ನೇರ ಚಿತ್ರಕಲೆ ಪ್ರಸ್ತುತಿ ನಡೆಯಲಿದೆ ಎಂದು ಹೇಳಿದರು.

ಸೆ.17ರಂದು ಸಂಗೀತ ಸಂಜೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಸರಿಗಮಪ ಖ್ಯಾತಿಯ ಸರ್ವಜ್ಞ ಅವರ ತಂಡದಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ. ಸೆ.18ರಂದು ಜಿಲ್ಲಾ ಆರೋಗ್ಯ ಇಲಾಖೆ ರಾಯಚೂರು ಹಾಗೂ ಪೂರ್ಣಿಮಾ ಆಯುರ್ವೇದ ವೈದ್ಯಕೀಯ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ರಾಯಚೂರು ಇವರ ಸಂಯುಕ್ತ ಆಶ್ರಯದಲ್ಲಿ ಅನುಭವಿ ವೈದ್ಯರಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಸೆ.20ರಂದು ಗಣೇಶ ವಿಸರ್ಜನ ಮಹೋತ್ಸವ ನಡೆಯಲಿದ್ದು, ಗಣೇಶೋತ್ಸವದ ಎಲ್ಲ ಕಾರ್ಯಕ್ರಮಗಳಿಗೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಮಂಡಳಿಯ ಪದಾಧಿಕಾರಿಗಳು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಗಜಾನನ ಯುವಕ ಮಂಡಳಿಯ ಅಧ್ಯಕ್ಷ ಲಕ್ಷ್ಮಣ್ ಕುಮಾರ್, ಪದಾಧಿಕಾರಿಗಳಾದ ತರುಣ್, ತೇಜಸ್, ಪೃಥ್ವಿ, ಧನಂಜಯ್, ನಾಗರಾಜ್, ನಿತಿನ್, ಭರತ್, ಯಶ್ವಂತ್, ನಿಖಿಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಗ್ರಾಮ ಪಂಚಾಯತಿಯನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸಲು ಒತ್ತಾಯ

ಜಾಲಹಳ್ಳಿ, ಸೆ.12: ದೇವದುರ್ಗ ತಾಲೂಕಿನ ಪ್ರಮುಖ ಹಾಗೂ ದೊಡ್ಡ ಪಟ್ಟಣವಾಗಿರುವ ಜಾಲಹಳ್ಳಿ ಗ್ರಾಮ ಪಂಚಾಯತಿಯನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸಲು ಸರ್ಕಾರಕ್ಕೆ ಶಿಫಾರಸು ಮಾಡುವಂತೆ ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ದೇವದುರ್ಗ ತಾಲೂಕು ಘಟಕ ಹಾಗೂ ಜಾಲಹಳ್ಳಿ ಸಾರ್ವಜನಿಕರ ಪರವಾಗಿ ದೇವದುರ್ಗ ಕ್ಷೇತ್ರದ ಶಾಸಕಿ ಕರೆಮ್ಮ ಜಿ. ನಾಯಕ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ತಾಲೂಕಿನ ಪ್ರಮುಖ ಪಟ್ಟಣಗಳಲ್ಲಿ ಒಂದಾಗಿರುವ ಜಾಲಹಳ್ಳಿ ದಿನದಿಂದ ದಿನಕ್ಕೆ ವೇಗವಾಗಿ ಅಭಿವೃದ್ಧಿಯಾಗುತ್ತಿದ್ದು, ಜನಸಂಖ್ಯೆ ಹಾಗೂ ವಾಣಿಜ್ಯ ಚಟುವಟಿಕೆಗಳೂ ಹೆಚ್ಚಾಗುತ್ತಿವೆ. ಸುಮಾರು 20ರಿಂದ 25 ಸಾವಿರ ಜನಸಂಖ್ಯೆ ಹೊಂದಿರುವ ಜಾಲಹಳ್ಳಿ ಗ್ರಾಮ ಪಂಚಾಯತಿಯಲ್ಲಿ ರಾಜ್ಯದಲ್ಲೇ ಅತಿ ಹೆಚ್ಚು 33 ಸದಸ್ಯರಿದ್ದಾರೆ. ಆದರೆ ಗ್ರಾಮ ಪಂಚಾಯತಿಗೆ ಲಭ್ಯವಾಗುವ ಅನುದಾನ ಹಾಗೂ ಪ್ರಸ್ತುತ ಆಡಳಿತ ವ್ಯವಸ್ಥೆ ಪಟ್ಟಣದ ಅಗತ್ಯಗಳಿಗೆ ಸಮರ್ಪಕವಾಗುತ್ತಿಲ್ಲ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಪಟ್ಟಣದಲ್ಲಿ ರಸ್ತೆ, ಚರಂಡಿ, ಕುಡಿಯುವ ನೀರು, ಬೀದಿ ದೀಪ, ನೈರ್ಮಲ್ಯ ಹಾಗೂ ಸಾರ್ವಜನಿಕ ಆರೋಗ್ಯ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಸಮರ್ಪಕವಾಗಿ ಕಲ್ಪಿಸಲು ಜಾಲಹಳ್ಳಿಯನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸುವುದು ಅಗತ್ಯವಾಗಿದೆ. ಈ ಹಿಂದೆ ಜಾಲಹಳ್ಳಿಯನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸುವ ಪ್ರಕ್ರಿಯೆ ನಡೆದಿದ್ದರೂ, ನ್ಯಾಯಾಲಯದ ಮೊರೆ ಹೋಗಿದ್ದರಿಂದ ಪ್ರಕ್ರಿಯೆ ಬಾಕಿ ಉಳಿದಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.



ಈ ಹಿನ್ನೆಲೆಯಲ್ಲಿ ಶಾಸಕರು ವಿಷಯವನ್ನು ಕರ್ನಾಟಕ ವಿಧಾನಸಭೆಯ ಅಧಿವೇಶನದಲ್ಲಿ ಪ್ರಸ್ತಾಪಿಸಿ ಸರ್ಕಾರದ ಗಮನಕ್ಕೆ ತರಬೇಕು. ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣವನ್ನು ಇತ್ಯರ್ಥಗೊಳಿಸಿ, ಜಾಲಹಳ್ಳಿಯನ್ನು ಪುರಸಭೆಯಾಗಿ ಘೋಷಿಸುವ ಪ್ರಕ್ರಿಯೆಯನ್ನು ಮುಂದುವರಿಸಲು ಸಂಬಂಧಪಟ್ಟ ಇಲಾಖೆಗೆ ನಿರ್ದೇಶನ ನೀಡುವಂತೆ ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಅಧ್ಯಕ್ಷ ನಂದಪ್ಪ ಪಿ. ಮಡ್ಡಿ, ಪ್ರಧಾನ ಕಾರ್ಯದರ್ಶಿ ಗುರುನಾಥ್ ರೆಡ್ಡಿ ಎಂ., ತಾಲೂಕು ಸಂಚಾಲಕ ಭೀಮಣ್ಣ ನಾಯಕ್, ಕಾನೂನು ಸಲಹೆಗಾರ ನಂದಪ್ಪ ಎಸ್., ವಿಕಲಚೇತನ ಘಟಕದ ಅಧ್ಯಕ್ಷ ಭೀಮರಾಯ ಎಂ. ನಾಯಕ್, ಶಾಂತಪ್ಪ ಬಳಿ ಸಾಹು, ಜಾಲಹಳ್ಳಿ ಹೋಬಳಿ ಘಟಕದ ಅಧ್ಯಕ್ಷ ತಮ್ಮಣ್ಣ ಹೆರುಂಡಿ, ಯುವ ಘಟಕದ ಅಧ್ಯಕ್ಷ ಮಲ್ಲು ತೆಗಳಿ, ಹೋಬಳಿ ಉಪಾಧ್ಯಕ್ಷ ಅಮರೇಶ ಪಾಟೀಲ, ಗ್ರಾಮ ಘಟಕದ ಉಪಾಧ್ಯಕ್ಷ ವೆಂಕಟೇಶ ಜಗರ್ಕಲ್, ಶಿವು ಎರಗುಡ್ಡ, ಮಲ್ಲಿಕಾರ್ಜುನ ಹಡಪದ್, ಮಲ್ಲು ಅಡಪದ್, ಖಾಜ ಹುಸೇನ್, ಹೈದೆರ್ ಸಾಬ್ ಮುಲ್ಲಾ, ಬಾಳಪ್ಪ ಭಾವಿಮನಿ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಗ್ರಾಮದ ಸಾರ್ವಜನಿಕರು ಉಪಸ್ಥಿತರಿದ್ದರು.

# ಭಯೋತ್ಪಾದನೆ ವಿರುದ್ಧ ಶೂನ್ಯ ಸಹಿಷ್ಣುತೆ ಪುನರುಚ್ಚಾರ

ನವದೆಹಲಿ: ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭೀಕರ ಉಗ್ರರ ದಾಳಿಯನ್ನು ಬ್ರಿಕ್ಸ್ ರಾಷ್ಟ್ರಗಳ ನಾಯಕರು ಮತ್ತೊಮ್ಮೆ ತೀವ್ರವಾಗಿ ಖಂಡಿಸಿದ್ದು, ಭಯೋತ್ಪಾದನೆ ವಿರುದ್ಧ ಯಾವುದೇ ರಾಜಿ ಇಲ್ಲದ ಶೂನ್ಯ ಸಹಿಷ್ಣುತೆಯ ನಿಲುವನ್ನು ಪುನರುಚ್ಚರಿಸಿದ್ದಾರೆ.

ನವದೆಹಲಿಯಲ್ಲಿ ನಡೆಯುತ್ತಿರುವ 18ನೇ ಬ್ರಿಕ್ಸ್ ಶೃಂಗಸಭೆಯ ಅಂಗವಾಗಿ ಅಂಗೀಕರಿಸಲಾದ 140 ಅಂಶಗಳ ನ್ಯೂ ಡೆಲ್ಲಿ ಘೋಷಣೆಯಲ್ಲಿ ಪಹಲ್ಗಾಮ್ ಉಗ್ರ ದಾಳಿಯನ್ನು ಉಲ್ಲೇಖಿಸಿ, ಭಯೋತ್ಪಾದನೆಯ ಎಲ್ಲ ರೂಪಗಳನ್ನೂ ಏಕಸ್ವರದಲ್ಲಿ ಖಂಡಿಸಲಾಗಿದೆ.

2025ರ ಏಪ್ರಿಲ್ 22ರಂದು ಪಹಲ್ಗಾಮ್‌ನ ಬೈಸರನ್ ಕಣಿವೆಯಲ್ಲಿ ನಡೆದ ಉಗ್ರರ ದಾಳಿಯಲ್ಲಿ ಒಟ್ಟು 26 ಮಂದಿ ಮೃತಪಟ್ಟಿದ್ದರು. ಇವರಲ್ಲಿ ಪ್ರವಾಸಿಗರು ಸೇರಿದಂತೆ 25 ಮಂದಿ ಹಾಗೂ ಸ್ಥಳೀಯ ಕುದುರೆ ಸವಾರರೊಬ್ಬರು ಸೇರಿದ್ದರು. ದಾಳಿಯಲ್ಲಿ ಹಲವು ಮಂದಿ ಗಾಯಗೊಂಡಿದ್ದರು. ಈ ಘಟನೆ ದೇಶಾದ್ಯಂತ ತೀವ್ರ ಆಕ್ರೋಶಕ್ಕೆ ಕಾರಣವಾಗಿತ್ತು.

ಬ್ರಿಕ್ಸ್ ಘೋಷಣೆಯಲ್ಲಿ, ಯಾವುದೇ ಉದ್ದೇಶ, ಕಾರಣ ಅಥವಾ ಸಿದ್ಧಾಂತದ ಹೆಸರಿನಲ್ಲಿ ನಡೆದರೂ ಭಯೋತ್ಪಾದನೆಯ ಕೃತ್ಯಗಳು ಅಪರಾಧವಾಗಿದ್ದು, ಅವುಗಳನ್ನು ಯಾವುದೇ ರೀತಿಯಲ್ಲೂ ಸಮರ್ಥಿಸಲಾಗದು ಎಂದು ಸ್ಪಷ್ಟಪಡಿಸಲಾಗಿದೆ.




ಉಗ್ರ ಚಟುವಟಿಕೆಗಳಲ್ಲಿ ಭಾಗಿಯಾಗುವವರು, ಅವುಗಳಿಗೆ ಹಣಕಾಸು ನೆರವು ನೀಡುವವರು, ಆಶ್ರಯ ಕಲ್ಪಿಸುವವರು ಹಾಗೂ ಬೆಂಬಲಿಸುವವರನ್ನೂ ಸಂಬಂಧಿತ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಕಾನೂನುಗಳ ಅನ್ವಯ ಹೊಣೆಗಾರರನ್ನಾಗಿ ಮಾಡಿ ನ್ಯಾಯದ ಮುಂದೆ ತರಬೇಕು ಎಂದು ಕರೆ ನೀಡಲಾಗಿದೆ.

ವಿಶ್ವಸಂಸ್ಥೆಯಿಂದ ಗುರುತಿಸಲ್ಪಟ್ಟಿರುವ ಉಗ್ರರು ಹಾಗೂ ಭಯೋತ್ಪಾದಕ ಸಂಘಟನೆಗಳ ವಿರುದ್ಧ ಎಲ್ಲಾ ರಾಷ್ಟ್ರಗಳು ಒಗ್ಗಟ್ಟಿನಿಂದ, ಸಮನ್ವಯದಿಂದ ಕ್ರಮ ಕೈಗೊಳ್ಳಬೇಕು. ಉಗ್ರರ ಗಡಿಯಾಚೆ ಸಂಚಾರ, ಭಯೋತ್ಪಾದನೆಗೆ ಹಣಕಾಸು ನೆರವು, ಉಗ್ರರಿಗೆ ಸುರಕ್ಷಿತ ತಾಣ ಒದಗಿಸುವ ಜಾಲಗಳು ಹಾಗೂ ಅತಿರೇಕಿ ಚಟುವಟಿಕೆಗಳಿಗೆ ಬೆಂಬಲ ನೀಡುವ ವ್ಯವಸ್ಥೆಗಳನ್ನು ಸಂಪೂರ್ಣವಾಗಿ ನಿಗ್ರಹಿಸುವ ಅಗತ್ಯವಿದೆ ಎಂದು ಘೋಷಣೆಯಲ್ಲಿ ಒತ್ತಿಹೇಳಲಾಗಿದೆ.

ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಯಾವುದೇ ರೀತಿಯ ದ್ವಿಮಾನದಂಡಗಳಿಗೆ ಅವಕಾಶ ಇರಬಾರದು ಎಂದಿರುವ ಬ್ರಿಕ್ಸ್ ನಾಯಕರು, ಒಂದು ಪ್ರದೇಶದಲ್ಲಿ ಉಗ್ರ ಕೃತ್ಯಗಳನ್ನು ಖಂಡಿಸಿ ಮತ್ತೊಂದು ಪ್ರದೇಶದಲ್ಲಿ ಅದೇ ರೀತಿಯ ಕೃತ್ಯಗಳನ್ನು ನಿರ್ಲಕ್ಷಿಸುವ ನಿಲುವು ಸರಿಯಲ್ಲ ಎಂಬ ಸಂದೇಶ ನೀಡಿದ್ದಾರೆ.

ಯುವಜನರಲ್ಲಿ ತೀವ್ರಗಾಮಿತ್ವ, ಅತಿರೇಕಿ ಚಿಂತನೆ ಹಾಗೂ ಭಯೋತ್ಪಾದಕ ಸಿದ್ಧಾಂತಗಳ ಪ್ರಭಾವ ಹೆಚ್ಚದಂತೆ ತಡೆಯಲು ಸದಸ್ಯ ರಾಷ್ಟ್ರಗಳು ಪರಸ್ಪರ ಸಹಕಾರ ಹೆಚ್ಚಿಸಬೇಕು. ಇದಕ್ಕಾಗಿ ಉತ್ತಮ ಆಡಳಿತ ಕ್ರಮಗಳು, ಮಾಹಿತಿ ವಿನಿಮಯ, ತಾಂತ್ರಿಕ ಸಹಕಾರ ಹಾಗೂ ಪರಿಣಾಮಕಾರಿ ತಡೆ ಕ್ರಮಗಳನ್ನು ಹಂಚಿಕೊಳ್ಳುವ ಅಗತ್ಯವನ್ನೂ ಘೋಷಣೆ ಪ್ರತಿಪಾದಿಸಿದೆ.

ಬ್ರಿಕ್ಸ್ ರಾಷ್ಟ್ರಗಳು ಭಯೋತ್ಪಾದನೆ ವಿರುದ್ಧ ಸಮಗ್ರ, ಸಂಘಟಿತ ಹಾಗೂ ದೀರ್ಘಕಾಲಿಕ ಹೋರಾಟ ಅಗತ್ಯ ಎಂದು ಅಭಿಪ್ರಾಯಪಟ್ಟಿದ್ದು, ಉಗ್ರ ಸಂಘಟನೆಗಳಿಗೆ ಹಣಕಾಸು, ಶಸ್ತ್ರಾಸ್ತ್ರ, ತಾಂತ್ರಿಕ ನೆರವು ಮತ್ತು ಪ್ರಚಾರ ವೇದಿಕೆಗಳು ಲಭ್ಯವಾಗದಂತೆ ಜಾಗತಿಕ ಮಟ್ಟದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿವೆ.

2025ರ ಜುಲೈನಲ್ಲಿ ರಿಯೊ ಡಿ ಜನೈರೊದಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆಯಲ್ಲೂ ಪಹಲ್ಗಾಮ್ ದಾಳಿಯನ್ನು ಖಂಡಿಸಲಾಗಿತ್ತು. ಇದೀಗ ನವದೆಹಲಿಯ ಘೋಷಣೆಯಲ್ಲೂ ಇದೇ ವಿಷಯವನ್ನು ಪುನರುಚ್ಚರಿಸಿರುವುದು, ಭಯೋತ್ಪಾದನೆ ವಿರುದ್ಧ ಬ್ರಿಕ್ಸ್ ರಾಷ್ಟ್ರಗಳ ಒಗ್ಗಟ್ಟಿನ ನಿಲುವಿಗೆ ಮತ್ತಷ್ಟು ಬಲ ನೀಡಿದೆ.

ಪಹಲ್ಗಾಮ್ ದಾಳಿಯ ಉಲ್ಲೇಖವನ್ನು ನ್ಯೂ ಡೆಲ್ಲಿ ಘೋಷಣೆಯಲ್ಲಿ ಸೇರಿಸಿರುವುದು ಭಾರತದ ಭಯೋತ್ಪಾದನೆ ವಿರೋಧಿ ನಿಲುವಿಗೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ದೊರೆತ ಮಹತ್ವದ ಬೆಂಬಲವೆಂದು ಪರಿಗಣಿಸಲಾಗುತ್ತಿದೆ. ಬ್ರಿಕ್ಸ್ ವೇದಿಕೆಯಲ್ಲಿ ಭಯೋತ್ಪಾದನೆ ವಿರುದ್ಧ ಸಮನ್ವಿತ ಕ್ರಮ, ದ್ವಿಮಾನದಂಡ ವಿರೋಧಿ ನಿಲುವು ಹಾಗೂ ಉಗ್ರ ಜಾಲಗಳಿಗೆ ಬೆಂಬಲ ನೀಡುವ ಎಲ್ಲಾ ಮೂಲಗಳನ್ನು ಕಡಿತಗೊಳಿಸುವ ಅಗತ್ಯವನ್ನು ಮತ್ತೊಮ್ಮೆ ಪ್ರಬಲವಾಗಿ ಪ್ರತಿಪಾದಿಸಲಾಗಿದೆ.

# ಪರಿಸರ ಸ್ನೇಹಿ ಗಣೇಶೋತ್ಸವ ಆಚರಿಸಿ: ಜೈಪಾಲ್ ರೆಡ್ಡಿ

ರಾಯಚೂರು, ಸೆ.13: ಗೌರಿ-ಗಣೇಶ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸುವ ಮೂಲಕ ರಾಯಚೂರು ನಗರವನ್ನು ಹಸಿರಾಗಿಸೋಣ ಎಂದು ಮಹಾನಗರ ಪಾಲಿಕೆ ವಲಯ ಆಯುಕ್ತ ಜೈಪಾಲ್ ರೆಡ್ಡಿ ಕರೆ ನೀಡಿದರು.

ನಗರದ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಮಹಾನಗರ ಪಾಲಿಕೆ ಹಾಗೂ ಗ್ರೀನ್ ರಾಯಚೂರು ಸಹಯೋಗದಲ್ಲಿ ಆಯೋಜಿಸಿದ್ದ ಉಚಿತ ಪರಿಸರ ಸ್ನೇಹಿ ಬೀಜವುಳ್ಳ ಮಣ್ಣಿನ ಗಣೇಶ ಮೂರ್ತಿ ತಯಾರಿಕಾ ಕಾರ್ಯಾಗಾರ'ದ'ಲ್ಲಿ ಮಾತನಾಡಿದ ಅವರು, ಪ್ರತಿವರ್ಷ ಪಿಒಪಿ ಗಣೇಶ ಮೂರ್ತಿಗಳ ವಿಸರ್ಜನೆಯಿಂದ ಕೆರೆ, ನದಿ ಸೇರಿದಂತೆ ಜಲಮೂಲಗಳು ಕಲುಷಿತಗೊಳ್ಳುತ್ತಿವೆ. ರಾಸಾಯನಿಕ ಬಣ್ಣಗಳಿಂದ ಜಲಚರಗಳಿಗೂ ಅಪಾಯ ಉಂಟಾಗುತ್ತಿದೆ ಎಂದು ಹೇಳಿದರು.



ಈ ಹಿನ್ನೆಲೆಯಲ್ಲಿ ಈ ಬಾರಿ ಮಣ್ಣಿನ ಗಣೇಶ ಮೂರ್ತಿಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ನೈಸರ್ಗಿಕ ಬಣ್ಣಗಳಿಂದ ಅಲಂಕರಿಸಿದ ಸಣ್ಣ ಮಣ್ಣಿನ ಮೂರ್ತಿಗಳನ್ನು ಪ್ರತಿಷ್ಠಾಪಿಸಬೇಕು. ಪ್ಲಾಸ್ಟಿಕ್ ಹಾಗೂ ಥರ್ಮಾಕೋಲ್ ಅಲಂಕಾರವನ್ನು ಸಂಪೂರ್ಣವಾಗಿ ತ್ಯಜಿಸಿ, ಹೂವು, ಎಲೆ, ಬಿದಿರು ಸೇರಿದಂತೆ ಪರಿಸರ ಸ್ನೇಹಿ ವಸ್ತುಗಳನ್ನು ಬಳಸಬೇಕು ಎಂದು ಸಲಹೆ ನೀಡಿದರು.

ಗಣೇಶ ಮೂರ್ತಿಗಳನ್ನು ನಿಗದಿತ ಕಲ್ಯಾಣಿಗಳಲ್ಲಿ ಅಥವಾ ಮನೆಯಲ್ಲೇ ಬಕೆಟ್‌ನಲ್ಲಿರುವ ನೀರಿನಲ್ಲಿ ವಿಸರ್ಜಿಸಿ, ನಂತರ ಉಳಿಯುವ ಮಣ್ಣನ್ನು ಗಿಡಗಳಿಗೆ ಬಳಸುವ ಮೂಲಕ ಪರಿಸರ ಸಂರಕ್ಷಣೆಗೆ ಕೈಜೋಡಿಸಬಹುದು. ಇಂತಹ ಚಟುವಟಿಕೆಗಳಿಂದ ಮಕ್ಕಳಲ್ಲಿ ಚಿಕ್ಕ ವಯಸ್ಸಿನಿಂದಲೇ ಪರಿಸರ ಪ್ರಜ್ಞೆ ಬೆಳೆಸಲು ಸಾಧ್ಯ. ಪರಿಸರ ಉಳಿದರೆ ಮಾತ್ರ ಹಬ್ಬದ ಸಂಭ್ರಮಕ್ಕೆ ನಿಜವಾದ ಅರ್ಥ ಸಿಗುತ್ತದೆ ಎಂದು ಜೈಪಾಲ್ ರೆಡ್ಡಿ ಹೇಳಿದರು.

ಕಾರ್ಯಾಗಾರದಲ್ಲಿ 200ಕ್ಕೂ ಹೆಚ್ಚು ಮಕ್ಕಳು ಉತ್ಸಾಹದಿಂದ ಭಾಗವಹಿಸಿ, ಸ್ವತಃ ಮಣ್ಣಿನ ಗಣೇಶ ಮೂರ್ತಿಗಳನ್ನು ತಯಾರಿಸಿದರು.

ಈ ಸಂದರ್ಭದಲ್ಲಿ ಗ್ರೀನ್ ರಾಯಚೂರು ಉಪಾಧ್ಯಕ್ಷ ಸಿ.ವಿ. ಪಾಟೀಲ್, ನಂದಾಪುರ ಶ್ರೀನಿವಾಸ, ಲಾಲ್‌ಜಿ ಪಾಟೀಲ್, ರಾಜೇಂದ್ರಕುಮಾರ್ ಶಿವಾಳೆ, ಸರಸ್ವತಿ ಕಿಲಕಿಲೆ, ಭೀಮಾಶಂರ್ಕ, ರಾಜು ಸೇರಿದಂತೆ ಪಾಲಿಕೆ ಅಧಿಕಾರಿಗಳು, ಮಕ್ಕಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಅಮೃತ ವಾಣಿ

ಸತ್ಯದ ಜೊತೆ
ಮತ್ತು ಸತ್ತವರ
ಜೊತೆ ಜಾಸ್ತಿ
ಹೊತ್ತು ಯಾರು ಇರಲ್ಲ.

## 1585ನೇಯ ದಿನಕ್ಕೆ ಏಮ್ಸ್ ಹೋರಾಟ

अखिल भारतीय आयुर्विज्ञान संस्थान
ALL INDIA INSTITUTE OF MEDICAL SCIENCES
शरीरमाद्यं खलु धर्मसाधनम्

# ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಕ್ಕೆ ನೂತನ ತಾತ್ಕಾಲಿಕ ಸಮಿತಿ

ಪಾಂಡುರಂಗ ಹಾಗೂ ಷಂಷಾದ್ ಬೇಗಂ, ಸಂಘಟನಾ ಕಾರ್ಯದರ್ಶಿಗಳಾಗಿ ಸೂಗುರೇಶ್ ಹಾಗೂ ಸುನಿತಾ, ಜಂಟಿ ಕಾರ್ಯದರ್ಶಿಗಳಾಗಿ ಶಿವರಾಜ ಹಾಗೂ ರತ್ನಾ ಹಾದಿಮನಿ ಸೇರಿದಂತೆ ಒಟ್ಟು 10 ಸದಸ್ಯರನ್ನು ನೇಮಕ ಮಾಡಲಾಗಿದೆ ಎಂದು ತಿಳಿಸಿದರು.

ಈ ಸಮಿತಿಯು ಸಂಘದ ನಿತ್ಯದ ಆಡಳಿತ ನಿರ್ವಹಣೆ, ಸದಸ್ಯತ್ವ ದಾಖಲೆಗಳ ಸಂರಕ್ಷಣೆ, ಶಿಕ್ಷಕರ ದಿನಾಚರಣೆ ಕಾರ್ಯಕ್ರಮಗಳ ಆಯೋಜನೆ ಹಾಗೂ ಮುಂದಿನ ಚುನಾವಣಾ ಪ್ರಕ್ರಿಯೆಗೆ ಅಗತ್ಯ ಸಹಕಾರ ನೀಡುವ ಜವಾಬ್ದಾರಿ ವಹಿಸಲಿದೆ.

ಅತಿ ಶೀಘ್ರದಲ್ಲಿ ತಾಲೂಕು ಘಟಕದ ವತಿಯಿಂದ ಶಿಕ್ಷಕರ ದಿನಾಚರಣೆ ಹಾಗೂ ಉತ್ತಮ ಶಿಕ್ಷಕರ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಜೊತೆಗೆ ಸೆ.19ರಂದು ನಡೆಯಲಿರುವ ಶಿಕ್ಷಣ ಅದಾಲತ್ತು ಕಾರ್ಯಕ್ರಮವನ್ನು ತಾಲೂಕಿನ ಶಿಕ್ಷಕರು ಸದುಪಯೋಗಪಡಿಸಿಕೊಳ್ಳುವಂತೆ ಘಟಕದ ವತಿಯಿಂದ ಅಗತ್ಯ ವ್ಯವಸ್ಥೆ ಮಾಡಲಾಗುವುದು ಎಂದು ಕೆ. ರಾಮು ಗಾಣದಾಳ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ರಂಗನಾಥ, ನೂರ್ ಉಲ್ ಹಕ್, ಷಂಷಾದ್ ಬೇಗಂ, ಶಿವರಾಜ್, ರತ್ನಾ ಹಾದಿಮನಿ ಹಾಗೂ ಸುನಿತಾ ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಆಧ್ಯಾತ್ಮಿಕತೆ ಗಾಳಿ, ನೀರು, ಅನ್ನದಷ್ಟೇ ಮುಖ್ಯ: ಶಾಸಕ ಬಸನಗೌಡ ದದ್ದಲ್

ಶ್ಲಾಘನೀಯ. ಪೂಜ್ಯ ಶಾಂತಮಲ್ಲ ಶಿವಾಚಾರ್ಯ ಸ್ವಾಮೀಜಿಗಳು ಎಲ್ಲ ಸಮುದಾಯಗಳನ್ನು ಪ್ರೀತಿಯಿಂದ ಕಾಣುತ್ತಾ ಸಮಾಜಮುಖಿ ಕಾರ್ಯಗಳಲ್ಲಿ ನಿರಂತರವಾಗಿ ತೊಡಗಿಸಿಕೊಂಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ ಮಾತನಾಡಿ, ಸಮಾಜದಲ್ಲಿ ನೈತಿಕ ಮೌಲ್ಯಗಳು ಮರೆಯಾಗುತ್ತಿರುವ ಸಂದರ್ಭದಲ್ಲಿ ಅವುಗಳನ್ನು ಉಳಿಸಿ ಬೆಳೆಸುವುದು ಎಲ್ಲರ ಆದ್ಯ ಕರ್ತವ್ಯವಾಗಿದೆ. ನೈತಿಕತೆ ಮತ್ತು ಆರೋಗ್ಯಕರ ಸಮಾಜ ನಿರ್ಮಾಣದ ಕಾರ್ಯದಲ್ಲಿ ಶ್ರೀಮಠ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಹೇಳಿದರು.

ಧರ್ಮ ಸಂದೇಶ ನೀಡಿದ ಸಲ್ತಾನಪುರದ ಪೂಜ್ಯರು, ಪುರಾಣ ಮತ್ತು ಪ್ರವಚನಗಳನ್ನು ಕೇಳುವುದಷ್ಟೇ ಅಲ್ಲದೆ ಅದರ ಸಾರವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಮಕ್ಕಳಿಗೂ ಆಧ್ಯಾತ್ಮಿಕ ಜ್ಞಾನ ಮತ್ತು ಸಂಸ್ಕಾರವನ್ನು ತಿಳಿಸಿಕೊಡಬೇಕು. ಕೇಳಿದ ಪುರಾಣದ ಸಂದೇಶದ ಕನಿಷ್ಠ ಒಂದು ಭಾಗವನ್ನಾದರೂ ಜೀವನದಲ್ಲಿ ಅಳವಡಿಸಿಕೊಂಡರೆ ಇಂತಹ ಪ್ರವಚನ ಕಾರ್ಯಕ್ರಮಗಳು ಸಾರ್ಥಕವಾಗುತ್ತವೆ ಎಂದು ಹೇಳಿದರು.

ಶ್ರೀಮಠದ ಶ್ರೀಗಳು ತಮ್ಮ ಧರ್ಮ ಸಂದೇಶದಲ್ಲಿ, ರೈತರು ಸಂಕಷ್ಟದಲ್ಲಿರುವ ಹಿನ್ನೆಲೆಯಲ್ಲಿ ಉತ್ತಮ ಮಳೆಗಾಗಿ ನಿತ್ಯವೂ ಪರಶಿವನಲ್ಲಿ ಪ್ರಾರ್ಥಿಸುತ್ತೇವೆ. ಪ್ರಕೃತಿಯ ಮೇಲೆ ಮನುಷ್ಯನಿಗೆ ಸಂಪೂರ್ಣ ಹಿಡಿತವಿಲ್ಲ. ಆದರೂ ಭಗವಂತನ ಕೃಪೆಯಿಂದ ಮಳೆರಾಯನ ಅನುಗ್ರಹ ದೊರೆತು ರೈತರ ಸಂಕಷ್ಟ ನಿವಾರಣೆಯಾಗಲಿ ಎಂದು ಆಶಿಸಿದರು.

ಪುರಾಣ ಪ್ರವಚನಕಾರ ವೇ.ಮೂ. ಸಿದ್ದರಾಮಯ್ಯ ಶಾಸ್ತ್ರಿಗಳು ಸೋಮನಾಳ ಹಿರೇಮಠ ಅವರು ಪ್ರವಚನದ ಸಮಾರೋಪ ಪೀಠಿಕೆಯನ್ನು ಪಠಿಸಿದರು. ಇದೇ ವೇಳೆ ಮುಂದಿನ ವರ್ಷದ ಶ್ರಾವಣ ಮಾಸದ ಪುರಾಣ ಕಾರ್ಯಕ್ರಮದ ಅಂಗವಾಗಿ ಶ್ರೀಮಠದ ಸಂಪ್ರದಾಯದಂತೆ ಆರಂಭಿಕ ಪೀಠಿಕೆಯ ಒಂದು ಅಧ್ಯಾಯವನ್ನು ಪಠಿಸಲಾಯಿತು. ವೇ.ಮೂ. ಹುಚ್ಚಯ್ಯ ಅಜ್ಜನವರು ಹಾಗೂ ರಾಘವೇಂದ್ರ ಆಶಾಪೂರ ಕಲಾವಿದರಾಗಿ ಸಾಥ್ ನೀಡಿದರು.

ಕಾರ್ಯಕ್ರಮದಲ್ಲಿ ಶ್ರೀಮಠದ ಕಾರ್ಯದರ್ಶಿ ವೇ.ಮೂ. ಪಂಪಾಪತಿ ಶಾಸ್ತ್ರಿಗಳು ನಾಡಂಗದ ಹಿರೇಮಠ, ದೊಡ್ಡನಗೌಡ ಸಾನಬಾಳ, ಚನ್ನಪ್ಪಗೌಡ ಸಾನಬಾಳ, ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ, ಮಾಜಿ ಉಪಮಹಾಪೌರ ಡಾ. ಸಾಜೀದ್ ಸಮೀರ್, ಮಾಜಿ ಪಾಲಿಕೆ ಸದಸ್ಯರಾದ ದರೂರ ಬಸವರಾಜ ಪಾಟೀಲ, ಜಿ. ಶಿವಮೂರ್ತಿ, ಬಿಜೆಪಿ ಮುಖಂಡ ಕಡಗೋಲ ಆಂಜನೇಯ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೆ. ಶಾಂತಪ್ಪ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಚಂದ್ರಶೇಖರ ಪಾಟೀಲ ಮಿರ್ಜಾಪೂರ, ವೀರಶೈವ ಲಿಂಗಾಯತ ಸಮಾಜದ ಜಿಲ್ಲಾಧ್ಯಕ್ಷ ಶರಣು ಭೂಪಾಲ ನಾಡಗೌಡ, ಹಿರಿಯ ವೈದ್ಯ ಜವಳಿ ನಿಜಗುಣ ಶಿವಯೋಗಪ್ಪ, ರವೀಂದ್ರ ಜಲ್ದಾರ, ಶಾಲಂ ಪಾಷಾ, ಪರಮೇಶ್ವರ ಸಾಲಿಮಠ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪವನ್ ಕಿಶೋರ್ ಪಾಟೀಲ, ಕುರ್ಡಿ ಶರಣರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಆಗಮಿಸಿದ ಪೂಜ್ಯರು, ಶಾಸಕರು, ಗಣ್ಯರು ಹಾಗೂ ಕಲಾವಿದರನ್ನು ಶ್ರೀಮಠದ ವತಿಯಿಂದ ಸನ್ಮಾನಿಸಲಾಯಿತು. ನಂತರ ಎಲ್ಲರೂ ಮಹಾಪ್ರಸಾದ ಸ್ವೀಕರಿಸಿದರು.

# 7ನೇ ಸಣ್ಣ ನೀರಾವರಿ ಹಾಗೂ 2ನೇ ಜಲಮೂಲಗಳ ಗಣತಿ ಕ್ಷೇತ್ರಕಾರ್ಯ ಪೂರ್ಣ

ಜಲಮೂಲಗಳಿವೆ, ಅಂತರ್ಜಲ ಹಾಗೂ ಮೇಲ್ಮೈ ಜಲ ಯೋಜನೆಗಳ ಸ್ಥಿತಿಗತಿ ಏನು ಎಂಬ ನಿಖರ ಮಾಹಿತಿ ಲಭ್ಯವಾದರೆ, ಮುಂದಿನ ನೀರಾವರಿ ಮತ್ತು ಜಲಸಂರಕ್ಷಣಾ ಯೋಜನೆಗಳನ್ನು ಹೆಚ್ಚು ವೈಜ್ಞಾನಿಕವಾಗಿ ಹಾಗೂ ಅಗತ್ಯಕ್ಕೆ ಅನುಗುಣವಾಗಿ ರೂಪಿಸಲು ಸಾಧ್ಯವಾಗುತ್ತದೆ ಎಂದು ಡಾ. ಅಜಯ್ ಧರ್ಮಸಿಂಗ್ ಹೇಳಿದರು.

ಸಣ್ಣ ನೀರಾವರಿ ಗಣತಿಯಲ್ಲಿ 2,000 ಹೆಕ್ಟೇರ್‌ವರೆಗಿನ ನೀರಾವರಿ ಸಾಮರ್ಥ್ಯ ಹೊಂದಿರುವ ಯೋಜನೆಗಳ ಮಾಹಿತಿಯನ್ನು ದಾಖಲಿಸಲಾಗಿದ್ದು, ಜಲಮೂಲಗಳ ಗಣತಿಯಲ್ಲಿ ಕೆರೆ, ಕಟ್ಟೆ ಸೇರಿದಂತೆ ವಿವಿಧ ಜಲಮೂಲಗಳ ಸಮಗ್ರ ಮಾಹಿತಿಯನ್ನು ಸಂಗ್ರಹಿಸಲಾಗಿದೆ ಎಂದು ತಿಳಿಸಿದರು.

ಈ ಅಂಕಿಅಂಶಗಳು ಕೇವಲ ಗಣತಿ ವರದಿಗೆ ಸೀಮಿತವಾಗದೆ, ಬರಪೀಡಿತ ಪ್ರದೇಶಗಳಲ್ಲಿ ಜಲಭದ್ರತೆ ಕಲ್ಪಿಸುವುದು, ಕೆರೆಗಳ ಪುನಶ್ಚೇತನ, ಅಂತರ್ಜಲ ಮರುಪೂರಣ, ಚೆಕ್ ಡ್ಯಾಂಗಳ ನಿರ್ಮಾಣ ಹಾಗೂ ಕೆರೆ ತುಂಬಿಸುವ ಯೋಜನೆಗಳಿಗೆ ಆದ್ಯತೆ ನಿಗದಿಪಡಿಸಲು ಪರಿಣಾಮಕಾರಿಯಾಗಿ ಬಳಸಬೇಕು. ದತ್ತಾಂಶ ಆಧಾರಿತ ಯೋಜನೆ ಮತ್ತು ತಂತ್ರಜ್ಞಾನದ ಬಳಕೆಯ ಮೂಲಕ ರಾಜ್ಯದ ಜಲಸಂಪನ್ಮೂಲಗಳ ಸಮರ್ಥ ನಿರ್ವಹಣೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

ರಾಜ್ಯದ ಪ್ರತಿಯೊಂದು ಭಾಗದ ಜಲಸಂಪನ್ಮೂಲಗಳ ಸ್ಥಿತಿಗತಿಯನ್ನು ಅರಿತು, ಎಲ್ಲಿ ಜಲಸಂರಕ್ಷಣಾ ಕ್ರಮಗಳ ಅಗತ್ಯ ಹೆಚ್ಚಿದೆ, ಎಲ್ಲಿ ಅಂತರ್ಜಲ ಮರುಪೂರಣಕ್ಕೆ ಆದ್ಯತೆ ನೀಡಬೇಕು ಹಾಗೂ ಯಾವ ಪ್ರದೇಶಗಳಲ್ಲಿ ಸಣ್ಣ ನೀರಾವರಿ ಮೂಲಸೌಕರ್ಯವನ್ನು ಬಲಪಡಿಸಬೇಕು ಎಂಬುದನ್ನು ನಿರ್ಧರಿಸಲು ಗಣತಿಯ ದತ್ತಾಂಶ ನೆರವಾಗಲಿದೆ ಎಂದು ಹೇಳಿದರು.

ಗಣತಿ ಕಾರ್ಯದಲ್ಲಿ ತೊಡಗಿಸಿಕೊಂಡು ನಿಗದಿತ ಅವಧಿಯಲ್ಲಿ ಕಾರ್ಯವನ್ನು ಪೂರ್ಣಗೊಳಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಅಭಿನಂದಿಸಿದ ಅವರು, ಉತ್ತಮವಾಗಿ ಕೆಲಸ ಮಾಡುವ ಅಧಿಕಾರಿಗಳನ್ನು ಗುರುತಿಸಿ ಪ್ರೋತ್ಸಾಹಿಸುವುದು ಉತ್ತಮ ಆಡಳಿತದ ಭಾಗವಾಗಿದ್ದು, ರಾಜ್ಯದಾದ್ಯಂತ ನಡೆದ ಈ ಬೃಹತ್ ಗಣತಿ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಪ್ರತಿಯೊಬ್ಬ ಅಧಿಕಾರಿ ಮತ್ತು ಸಿಬ್ಬಂದಿಯ ಶ್ರಮ ಅಭಿನಂದನಾರ್ಹವಾಗಿದೆ ಎಂದು ಹೇಳಿದರು.

# ಗಣೇಶೋತ್ಸವ ಬಂದೋಬಸ್ತ್‌ಗೆ ಪೊಲೀಸ್ ಇಲಾಖೆ ಸಜ್ಜು: ಅಧಿಕಾರಿಗಳಿಗೆ ಎಸ್‌ಪಿ ಅರುಣಾಂಗ್ಷು ಗಿರಿ ಸೂಚನೆ, ಸಿಂಧನೂರಿನಲ್ಲಿ ರೂಟ್ ಮಾರ್ಚ್

ಅರುಣಾಂಗ್ಷು ಗಿರಿ ಐಪಿಎಸ್ ಅವರ ನೇತೃತ್ವದಲ್ಲಿ ಗಣೇಶೋತ್ಸವದ ಹಿನ್ನೆಲೆ ರೂಟ್ ಮಾರ್ಚ್ ನಡೆಸಲಾಯಿತು. ಸಿಂಧನೂರು ನಗರ ಪೊಲೀಸ್ ಠಾಣೆಯಿಂದ ಆರಂಭವಾದ ರೂಟ್ ಮಾರ್ಚ್ ಎಂ.ಜಿ. ವೃತ್ತ, ಬಸವ ವೃತ್ತ, ಹಳೆ ಬಜಾರ್, ಚನ್ನಮ್ಮ ವೃತ್ತ ಹಾಗೂ ಕನಕದಾಸ ವೃತ್ತ ಮಾರ್ಗವಾಗಿ ಸಾಗಿಬಂದು ಮತ್ತೆ ಸಿಂಧನೂರು ನಗರ ಪೊಲೀಸ್ ಠಾಣೆಯಲ್ಲಿ ಅಂತ್ಯಗೊಂಡಿತು.

ನಗರದ ಪ್ರಮುಖ ರಸ್ತೆ ಹಾಗೂ ಜನನಿಬಿಡ ಪ್ರದೇಶಗಳಲ್ಲಿ ಪೊಲೀಸ್ ಸಿಬ್ಬಂದಿ ಶಿಸ್ತುಬದ್ಧವಾಗಿ ನಡೆಸಿದ ರೂಟ್ ಮಾರ್ಚ್ ಸಾರ್ವಜನಿಕರ ಗಮನ ಸೆಳೆಯಿತು. ಗಣೇಶೋತ್ಸವದ ಸಂದರ್ಭದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವುದರ ಜೊತೆಗೆ, ಸಾರ್ವಜನಿಕರಲ್ಲಿ ಸುರಕ್ಷತೆಯ ಭಾವನೆ ಮೂಡಿಸುವ ಉದ್ದೇಶದಿಂದ ಈ ರೂಟ್ ಮಾರ್ಚ್ ಆಯೋಜಿಸಲಾಗಿತ್ತು.

ಗಣೇಶೋತ್ಸವವನ್ನು ಭಕ್ತಿಭಾವದಿಂದ ಹಾಗೂ ಸೌಹಾರ್ದಯುತ ವಾತಾವರಣದಲ್ಲಿ ಆಚರಿಸಬೇಕು. ಮೆರವಣಿಗೆ ಹಾಗೂ ವಿಸರ್ಜನೆ ವೇಳೆ ಸಾರ್ವಜನಿಕರು ಪೊಲೀಸ್ ಇಲಾಖೆಯ ಸೂಚನೆಗಳನ್ನು ಪಾಲಿಸಿ ಸಹಕರಿಸಬೇಕು ಎಂಬ ಸಂದೇಶವನ್ನೂ ಈ ಸಂದರ್ಭದಲ್ಲಿ ನೀಡಲಾಯಿತು.

ಜಿಲ್ಲೆಯಾದ್ಯಂತ ಗಣೇಶೋತ್ಸವದ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಇಲಾಖೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದ್ದು, ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಜ್ಜಾಗಿದ್ದಾರೆ.

# ಜಿಲ್ಲಾ 12ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸ್ವಾಗತ ಸಮಿತಿ ರಚನೆ

ತಾಲೂಕು ಕಸಾಪ ಅಧ್ಯಕ್ಷ ಡಾ. ಬಿ. ವಿಜಯ ರಾಜೇಂದ್ರ, ಜಿಲ್ಲಾ ಕಸಾಪ ಸಹ ಕಾರ್ಯದರ್ಶಿ ದಂಡಪ್ಪ ಬಿರಾದಾರ, ತಾಲೂಕು ಕಸಾಪ ಗೌರವ ಕಾರ್ಯದರ್ಶಿ ರಾವುತರಾವ್ ಬರೂರ, ತಾಲೂಕು ಕಸಾಪ ಕೋಶಾಧ್ಯಕ್ಷ ಸೈಯ್ಯದ್ ಹಫೀಜುಲ್ಲಾ ಖಾದ್ರಿ, ತಾಲೂಕು ಕಸಾಪ ಕಾರ್ಯದರ್ಶಿ ಪ್ರತಿಭಾ ಗೋನಾಳ, ಕಾರ್ಯಕಾರಿ ಸಮಿತಿ ಸದಸ್ಯರಾದ ವೆಂಕಟೇಶ ಹೂಗಾರ ಹಾಗೂ ಅಶೋಕ ಕುಮಾರ ಸಿ.ಕೆ. ಜೈನ್ ಅವರನ್ನು ಆಯ್ಕೆ ಮಾಡಲಾಗಿದೆ.

ಕೋಶಾಧ್ಯಕ್ಷರಾಗಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಕೋಶಾಧ್ಯಕ್ಷ ನಾಗಪ್ಪ ಹೊರಪ್ಯಾಟಿ ಅವರನ್ನು ಆಯ್ಕೆ ಮಾಡಲಾಗಿದೆ.

ಭಾನುವಾರ ನಡೆದ ಜಿಲ್ಲಾ ಕಾರ್ಯಕಾರಿ ಸಮಿತಿಯ ಸಭೆಯಲ್ಲಿ ಎಲ್ಲರ ಒಮ್ಮತದಿಂದ ಸ್ವಾಗತ ಸಮಿತಿಯ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಸಭೆಯಲ್ಲಿ ಭಾಗವಹಿಸಿದ್ದ ಮಾಜಿ ಶಾಸಕ ಎ. ಪಾಪಾರೆಡ್ಡಿ ಮಾತನಾಡಿ, ಸಾಹಿತ್ಯ ಸಮ್ಮೇಳನದ ಯಶಸ್ಸಿಗೆ ತನು-ಮನದಿಂದ ಸಹಕಾರ ನೀಡುವುದಾಗಿ ತಿಳಿಸಿದರು ಎಂದು ರಂಗಣ್ಣ ಪಾಟೀಲ ಅಳ್ಳುಂಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವ ಸತೀಶ ಜಾರಕಿಹೊಳಿ ಮೇಲಿನ ಇಡಿ ದಾಳಿ ರಾಜಕೀಯ ಪ್ರೇರಿತ: ಡಿ.ಎಸ್. ಹುಲಗೇರಿ ಆರೋಪ




ಲಿಂಗಸುಗೂರು: ರಾಜ್ಯ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹಾಗೂ ಅವರ ಬಂಧುಗಳ ಮನೆಗಳ ಮೇಲೆ ಜಾರಿ ನಿರ್ದೇಶನಾಲಯ (ಇಡಿ) ನಡೆಸಿರುವ ದಾಳಿ ರಾಜಕೀಯ ಪ್ರೇರಿತವಾಗಿದೆ. ಇಡಿ, ಸಿಬಿಐ ಹಾಗೂ ಐಟಿ ಇಲಾಖೆಗಳು ಕೇಂದ್ರ ಸರ್ಕಾರದ ಕೈಗೊಂಬೆಗಳಂತೆ ಕಾರ್ಯನಿರ್ವಹಿಸುತ್ತಿವೆ ಎಂದು ಮಾಜಿ ಶಾಸಕ ಹಾಗೂ ಕೆಪಿಸಿಸಿ ಉಪಾಧ್ಯಕ್ಷ ಡಿ.ಎಸ್. ಹುಲಗೇರಿ ಆರೋಪಿಸಿದರು.

ಪಟ್ಟಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಚಿವ ಸತೀಶ ಜಾರಕಿಹೊಳಿ ಅವರು ರಾಜ್ಯ ಕಾಂಗ್ರೆಸ್ ಪಕ್ಷದ ಬಲಿಷ್ಠ ನಾಯಕರಾಗಿದ್ದು, ಉದ್ಯಮಿಯಾಗಿಯೂ ಗುರುತಿಸಿಕೊಂಡಿದ್ದಾರೆ. ಅವರ ಹೆಸರಿಗೆ ಮಸಿ ಬಳಿಯುವ ಉದ್ದೇಶದಿಂದ ಕೇಂದ್ರ ಸರ್ಕಾರ ಇಡಿ ದಾಳಿ ನಡೆಸಿದೆ ಎಂದು ದೂರಿದರು.

ರಾಜ್ಯದಲ್ಲಿ ಬಿಜೆಪಿ ಪಕ್ಷದ ಅನೇಕ ಮುಖಂಡರ ವಿರುದ್ಧ ಅವ್ಯವಹಾರ ಹಾಗೂ ಭ್ರಷ್ಟಾಚಾರದ ಆರೋಪಗಳಿದ್ದರೂ ಅವರ ವಿರುದ್ಧ ಇಂತಹ ದಾಳಿಗಳು ನಡೆಯುತ್ತಿಲ್ಲ. ಆದರೆ ದಲಿತ ಸಮುದಾಯದ ಪ್ರಮುಖ ನಾಯಕರನ್ನು ಗುರಿಯಾಗಿಸಿಕೊಂಡು ದಾಳಿ ನಡೆಸುತ್ತಿರುವುದು ಖಂಡನೀಯ ಎಂದು ಹೇಳಿದರು.

ಸತೀಶ ಜಾರಕಿಹೊಳಿ ಅವರು ಉದ್ಯಮಿಯಾಗಿರುವುದರಿಂದ ಅವರ ವ್ಯವಹಾರಗಳಿಗೆ ಸಂಬಂಧಿಸಿದಂತೆ ಅಗತ್ಯ ದಾಖಲೆಗಳು ಮತ್ತು ಮಾಹಿತಿಯನ್ನು ತನಿಖಾ ಸಂಸ್ಥೆಗಳಿಗೆ ನೀಡುವ ಸಾಮರ್ಥ್ಯ ಹೊಂದಿದ್ದಾರೆ. ತನಿಖೆಗೆ ಅವರು ಸೂಕ್ತ ಉತ್ತರ ನೀಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಚಿವ ಸತೀಶ ಜಾರಕಿಹೊಳಿ ಅವರ ಮೇಲೆ ನಡೆಸಿರುವ ಇಡಿ ದಾಳಿಯನ್ನು ಲಿಂಗಸುಗೂರು ತಾಲೂಕು ಕಾಂಗ್ರೆಸ್ ತೀವ್ರವಾಗಿ ಖಂಡಿಸುತ್ತದೆ. ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರು ಅವರ ಬೆಂಬಲಕ್ಕೆ ಸದಾ ನಿಲ್ಲಲಿದ್ದಾರೆ ಎಂದು ಹುಲಗೇರಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕೆಪಿಸಿಸಿ ಸದಸ್ಯ ಅಮರಗುಂಡಪ್ಪ ಮೇಟಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದ ನಾಯಕ, ಶಿವಶಂಕರಗೌಡ, ಡಾ. ಶಿವಬಸಪ್ಪ, ಮಹ್ಮದ್ ರಫಿ, ಕಂಟೆಪ್ಪಗೌಡ, ಉಮೇಶ ಐಹೋಳೆ, ಸಂಜೀವಪ್ಪ ಹುನಕುಂಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಿಂದ ಪರಿಸರ ಸ್ನೇಹಿ ಗಣೇಶೋತ್ಸವ ಜಾಗೃತಿ ಜಾಥಾ




ರಾಯಚೂರು: ನಗರದ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ಗೌರಿ-ಗಣೇಶ ಹಬ್ಬದ ಹಿನ್ನೆಲೆಯಲ್ಲಿ ನಗರದ ಪ್ರಮುಖ ಸ್ಥಳಗಳಲ್ಲಿ ಪರಿಸರ ಸಂರಕ್ಷಣೆಯ ಕುರಿತು ವಿಶೇಷ ಜನಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಮಣ್ಣಿನ ಗಣೇಶ ಪೂಜಿಸಿರಿ ಪ್ರಕೃತಿಯನ್ನು ಆರಾಧಿಸಿರಿ ಎಂಬ ಘೋಷವಾಕ್ಯದಡಿ ನಡೆದ ಜಾಗೃತಿ ಕಾರ್ಯಕ್ರಮದಲ್ಲಿ ಎನ್‌ಎಸ್‌ಎಸ್ ವಿದ್ಯಾರ್ಥಿನಿ ಸ್ವಯಂಸೇವಕಿಯರು ಪರಿಸರ ಸ್ನೇಹಿ ಗಣೇಶೋತ್ಸವ ಆಚರಣೆಯ ಮಹತ್ವವನ್ನು ಸಾರ್ವಜನಿಕರಿಗೆ ತಿಳಿಸಿದರು.

ನಮ್ಮ ಗಣೇಶ ಮಣ್ಣಿನ ಗಣೇಶ, ಮಣ್ಣಿನ ಗಣೇಶ ಶ್ರೇಷ್ಠ ಗಣೇಶ, ಮಣ್ಣಿನ ಗಣೇಶ ಬೇಕು ಪಿಒಪಿ ಗಣೇಶ ಬೇಡ, ಮಣ್ಣಿನ ಗಣೇಶ ಪರಿಸರ ಸ್ನೇಹಿ ಗಣೇಶ, ರಾಸಾಯನಿಕ ಬಣ್ಣಗಳನ್ನು ವರ್ಜಿಸಿರಿ ನೈಸರ್ಗಿಕ ವರ್ಣಗಳನ್ನು ಬಳಸಿರಿ, ಪೂಜಿಸಿ ಪೂಜಿಸಿ ಮಣ್ಣಿನ ಗಣೇಶ ಪೂಜಿಸಿ ಎಂಬ ಘೋಷಣೆಗಳನ್ನು ಕೂಗುತ್ತಾ ಸ್ವಯಂಸೇವಕಿಯರು ನಗರದ ಪ್ರಮುಖ ಮಾರುಕಟ್ಟೆ ಪ್ರದೇಶಗಳಲ್ಲಿ ಜಾಥಾ ನಡೆಸಿದರು.

ಶ್ರೀ ಚಂದ್ರಮೌಳೀಶ್ವರ ವೃತ್ತ, ಭಂಗಿಕುಂಟ, ಮಾತಾ ಭವಾನಿ ವೃತ್ತ, ಓಸ್ಮಾನಿಯಾ ಮಾರುಕಟ್ಟೆ, ಶ್ರಾಫ್ ಬಜಾರ್, ಕಲ್ಲಾನೆ ವೃತ್ತ ಹಾಗೂ ಮಹಾವೀರ ವೃತ್ತಗಳಲ್ಲಿ ಬೀದಿನಾಟಕಗಳನ್ನು ಪ್ರದರ್ಶಿಸಿ ಜನರಲ್ಲಿ ಜಾಗೃತಿ ಮೂಡಿಸಲಾಯಿತು.

ಮಣ್ಣಿನ ಗಣೇಶ ಮೂರ್ತಿಗಳನ್ನು ಖರೀದಿಸುವುದು, ಮಾರುಕಟ್ಟೆ ಹಾಗೂ ಮನೆಗಳಲ್ಲಿ ಬಳಕೆಯಾಗುವ ನಿರುಪಯುಕ್ತ ಫಲ-ಪುಷ್ಪ ಸೇರಿದಂತೆ ಪೂಜಾ ಪರಿಕರಗಳನ್ನು ಸೂಕ್ತವಾಗಿ ವಿಲೇವಾರಿ ಮಾಡುವುದು, ಪಟಾಕಿ ಸಿಡಿತದಿಂದ ಉಂಟಾಗುವ ದುಷ್ಪರಿಣಾಮಗಳು ಹಾಗೂ ಗಣೇಶ ಮೂರ್ತಿ ವಿಸರ್ಜನೆ ವೇಳೆ ಪಾಲಿಸಬೇಕಾದ ಸುರಕ್ಷತಾ ಕ್ರಮಗಳ ಕುರಿತು ಸಾರ್ವಜನಿಕರಿಗೆ ತಿಳಿಸಲಾಯಿತು.

ಸ್ವಯಂಸೇವಕಿಯರಾದ ಭವಾನಿ, ಲಕ್ಷ್ಮೀ ಸಿ., ಸ್ವಪ್ನಾ ಹಾಗೂ ರೇಣುಕಾ ಡೊಳ್ಳು ಬಾರಿಸುವ ಮೂಲಕ ಸಾರ್ವಜನಿಕರ ಗಮನ ಸೆಳೆದರು. ಸಂಗೀತಾ, ಅನ್ನಪೂರ್ಣ, ಜಮುಲಮ್ಮ, ಜಮುನಾ, ರೇಖಾ, ಮಹೇಶ್ವರಿ ಬಿ., ತುಳಸಿ, ಅಂಬಿಕಾ, ಅಂಬುಜಾ, ಜಯಶ್ರೀ ಹಾಗೂ ಸಂಗೀತಾ ವಿ. ಜಾಗೃತಿ ಮೂಡಿಸುವ ಕಾರ್ಯದಲ್ಲಿ ಭಾಗವಹಿಸಿದರು.

ಜೆ.ಎಸ್. ಸುಷ್ಮಾ ಹಾಗೂ ರೂಪಾ ಛಾಯಾಗ್ರಹಣ ಮತ್ತು ಜಾಥಾದ ಶಿಸ್ತಿನ ನಿರ್ವಹಣೆ ಮಾಡಿದರು. ಕಾಲೇಜಿನ ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ಡಾ. ಸಂತೋಷಕುಮಾರ ರೇವೂರ ಕಾರ್ಯಕ್ರಮದ ನೇತೃತ್ವ ವಹಿಸಿದ್ದರು.

## ಹಿಂದೂ ಮಹಾ ಗಣೇಶ ಮೂರ್ತಿಗೆ ಅದ್ದೂರಿ ಸ್ವಾಗತ



ದೇವದುರ್ಗ, ಸೆ.13: ಪಟ್ಟಣದಲ್ಲಿ ಹಿಂದೂ ಮಹಾ ಗಣೇಶೋತ್ಸವದ ಅಂಗವಾಗಿ ಆಗಮಿಸಿದ ಗಣೇಶ ಮೂರ್ತಿಯನ್ನು ಭಕ್ತರು ಹಾಗೂ ಸಾರ್ವಜನಿಕರು ಭಕ್ತಿಭಾವ ಮತ್ತು ಸಂಭ್ರಮದಿಂದ ಅದ್ಧೂರಿಯಾಗಿ ಸ್ವಾಗತಿಸಿದರು.

ಪಟ್ಟಣದ ಜೈರುದ್ದೀನ್ ಪಾಶಾ ಸರ್ಕಲ್‌ನಿಂದ ವಡ್ಡರ ಕಟ್ಟೆಯವರೆಗೆ ಆಗಮಿಸಿದ ಹಿಂದೂ ಮಹಾ ಗಣೇಶ ಮೂರ್ತಿಗೆ ಸಾರ್ವಜನಿಕರು ವಿಶೇಷ ಪೂಜೆ ಸಲ್ಲಿಸಿ, ಹೂವಿನ ಹಾರಗಳನ್ನು ಅರ್ಪಿಸುವ ಮೂಲಕ ಭಕ್ತಿಪೂರ್ವಕವಾಗಿ ಬರಮಾಡಿಕೊಂಡರು.

ಈ ಸಂದರ್ಭದಲ್ಲಿ ಗಣೇಶ ಭಕ್ತರು ಹಾಗೂ ಪಟ್ಟಣದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಗಣಪತಿಯ ದರ್ಶನ ಪಡೆದು ಸಂಭ್ರಮಿಸಿದರು. ಗಣೇಶನ ಜಯಘೋಷಗಳೊಂದಿಗೆ ಮೂರ್ತಿಯನ್ನು ಸ್ವಾಗತಿಸಲಾಗಿದ್ದು, ಪಟ್ಟಣದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

## ಬಾಲಕಿಯರ ಪ್ರೌಢಶಾಲೆ ವಿದ್ಯಾರ್ಥಿನಿಯರು ಜಿಲ್ಲಾ ಮಟ್ಟಕ್ಕೆ ಆಯ್ಕೆ



ದೇವದುರ್ಗ: ಪಟ್ಟಣದ ಹೊರವಲಯದಲ್ಲಿರುವ ತಾಲೂಕು ಕ್ರೀಡಾಂಗಣದಲ್ಲಿ ಆಯೋಜಿಸಲಾದ ತಾಲೂಕು ಮಟ್ಟದ ಪ್ರೌಢಶಾಲಾ ಕ್ರೀಡಾಕೂಟದಲ್ಲಿ ಸರಕಾರಿ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿನಿಯರು ಉತ್ತಮ ಸಾಧನೆ ಮಾಡಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

200 ಮೀಟರ್ ಓಟದಲ್ಲಿ ಕುಮಾರಿ ಮಹಾಂತಮ್ಮ ದ್ವಿತೀಯ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. ಅದೇ ರೀತಿ 4400 ಮೀಟರ್ ರಿಲೇ ಓಟದಲ್ಲಿ ಕುಮಾರಿ ಗಂಗಮ್ಮ, ಸವಿತಾ, ಅಕ್ಷತಾ ಹಾಗೂ ದೇವಮ್ಮ ಅವರ ತಂಡ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟದ ಸ್ಪರ್ಧೆಗೆ ಅರ್ಹತೆ ಪಡೆದಿದೆ.

ತಾಲೂಕು ದೈಹಿಕ ಶಿಕ್ಷಣ ಅಧಿಕಾರಿ ಬಾಲಪ್ಪ ಭಾವಿಮನಿ ಸಾಧನೆ ಮಾಡಿದ ವಿದ್ಯಾರ್ಥಿನಿಯರಿಗೆ ಪ್ರಮಾಣಪತ್ರ ವಿತರಿಸಿ ಅಭಿನಂದಿಸಿ, ಮುಂದಿನ ಹಂತದ ಸ್ಪರ್ಧೆಗಳಿಗೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕಿ ಹಾಗೂ ಮಾರ್ಗದರ್ಶಕಿ ಮಮತಾ ಆದಿ, ದೈಹಿಕ ಶಿಕ್ಷಣ ಶಿಕ್ಷಕರಾದ ದಾವಲ್ ಸಾಬ್ ಬಂಡಿ, ಬಸವರಾಜ ಯಾಟಗಲ್, ಲೋಕೇಶ, ವ್ಯವಸ್ಥಾಪಕಿ ಸುಮಿತ್ರಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸಾಂಸ್ಕೃತಿಕ ಮೌಲ್ಯಗಳನ್ನು ಮರೆಯಬಾರದು: ಅಡಿವೆಮ್ಮ




ಸಿಂಧನೂರು: ಆಧುನಿಕತೆಯ ಇಂದಿನ ದಿನಗಳಲ್ಲಿ ವಿದ್ಯಾರ್ಥಿನಿಯರು ನಮ್ಮ ಸಾಂಸ್ಕೃತಿಕ ಮೌಲ್ಯಗಳನ್ನು ಯಾವುದೇ ಕಾರಣಕ್ಕೂ ಮರೆಯಬಾರದು. ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರವನ್ನು ಮೈಗೂಡಿಸಿಕೊಂಡಾಗ ಮಾತ್ರ ವಿದ್ಯಾರ್ಥಿನಿಯರ ಜೀವನ ಸಾರ್ಥಕವಾಗುತ್ತದೆ. ತಮಗೆ ಜನ್ಮ ನೀಡಿದ ಹೆತ್ತವರಿಗೆ ಹಾಗೂ ಅಕ್ಷರ ಕಲಿಸಿದ ಗುರುಗಳಿಗೆ ಸದಾ ಗೌರವ ತರುವಂತೆ ಬದುಕಬೇಕು ಎಂದು ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ನಿವೃತ್ತ ಮುಖ್ಯ ಶಿಕ್ಷಕಿ ಅಡಿವೆಮ್ಮ ಕರೆ ನೀಡಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಚುಟುಕು ಸಾಹಿತ್ಯ ಪರಿಷತ್ ಹಮ್ಮಿಕೊಂಡಿದ್ದ ಪ್ರಸಿದ್ಧ ಸಾಹಿತಿ ಚುಟುಕು ಬ್ರಹ್ಮ ದಿನಕರ ದೇಸಾಯಿ ಅವರ 117ನೇ ಜನ್ಮದಿನಾಚರಣೆ ಹಾಗೂ ಚುಟುಕು ಚಂದನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಆರಂಭದಲ್ಲಿ ಸಿಂಧನೂರು ತಾಲೂಕು ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಂ. ಭಾಸ್ಕರ್ ಪ್ರಾಸ್ತಾವಿಕವಾಗಿ ಮಾತನಾಡಿ, ಪರಿಷತ್ತಿನ ವಿವಿಧ ಕಾರ್ಯಚಟುವಟಿಕೆಗಳ ಕುರಿತು ಮಾಹಿತಿ ನೀಡಿದರು. ಇದೇ ವೇಳೆ ತಮ್ಮ ಸ್ವರಚಿತ ಚುಟುಕುಗಳನ್ನು ವಾಚಿಸಿದರು.

ದಿನಕರ ದೇಸಾಯಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮಾತನಾಡಿದ ಪತ್ರಕರ್ತ ಡಿ.ಎಚ್. ಕಂಬಳಿ, ಕನ್ನಡ ಸಾಹಿತ್ಯದಲ್ಲಿ ಚುಟುಕುಗಳಿಗೆ ವಿಶೇಷ ಸ್ಥಾನವಿದೆ. ಶರಣರ ವಚನಗಳು, ಸರ್ವಜ್ಞನ ವಚನಗಳು, ಜಾನಪದ ತ್ರಿಪದಿಗಳು ಹಾಗೂ ಚೌಪದಿಗಳು ಚುಟುಕು ರೂಪದಲ್ಲಿದ್ದರೂ ಸಮಾಜಕ್ಕೆ ದೊಡ್ಡ ಸಂದೇಶವನ್ನು ನೀಡುತ್ತವೆ ಎಂದು ಅಭಿಪ್ರಾಯಪಟ್ಟರು.

ರಾಯಚೂರು ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಗೌರವಾಧ್ಯಕ್ಷ ಹಾಗೂ ಹಿರಿಯ ಸಾಹಿತಿ ಬೀರಪ್ಪ ಶಂಭೋಜಿ ಅವರು ದಿನಕರ ದೇಸಾಯಿ ಹಾಗೂ ರಾಜ್ಯ ಸಂಚಾಲಕ ಡಾ. ಎಂ.ಜಿ.ಆರ್. ಅರಸು ಅವರ ಕುರಿತು ತಮ್ಮ ಸ್ವರಚಿತ ಚುಟುಕುಗಳನ್ನು ವಾಚಿಸಿ ಗಮನ ಸೆಳೆದರು.

ಲಿಂಗಸುಗೂರು ತಾಲೂಕು ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ದರ್ಗಾಸಿಂಗ್ ವಿಶೇಷ ಉಪನ್ಯಾಸ ನೀಡಿ, ದಿನಕರ ದೇಸಾಯಿ ಅವರ ಬದುಕು ಮತ್ತು ಸಾಹಿತ್ಯ ಸಾಧನೆ ಕುರಿತು ಬೆಳಕು ಚೆಲ್ಲಿದರು. ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ಮಹಂತಪ್ಪ ಕೊಡಗಲಿ ಅವರು ಜಗದ್ಗುರು ಬಸವಣ್ಣನವರ ಉಳ್ಳವರು ಶಿವಾಲಯ ಮಾಡುವರು ನಾನೇನು ಮಾಡಲಿ ಬಡವನಯ್ಯಾ ಎಂಬ ಪ್ರಸಿದ್ಧ ವಚನವನ್ನು ಮಧುರವಾಗಿ ಹಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಹಾಗೂ ರಂಗಭೂಮಿ ಕಲಾವಿದ ಕೃಷ್ಣಪ್ಪ ನಾಯಕ ಮಾತನಾಡಿ, ಸಾಹಿತ್ಯ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ವಿದ್ಯಾರ್ಥಿನಿಯರಲ್ಲಿರುವ ಪ್ರತಿಭೆಯನ್ನು ಹೊರತರುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದರು.

ಕಾರ್ಯಕ್ರಮದ ಅಂಗವಾಗಿ ನಡೆದ ಕವಿಗೋಷ್ಠಿಯಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕೋಶಾಧ್ಯಕ್ಷೆ ಹಾಗೂ ಕವಯಿತ್ರಿ ಶಾಂತಾ ಮಹೇಶ, ಮೊಹಮ್ಮದ್ ಶೇಖ್ ಶಾಜಿ ಹಾಗೂ ಉಪನ್ಯಾಸಕಿ ಮಹೇಶ್ವರಿ ತಮ್ಮ ಚುಟುಕುಗಳನ್ನು ವಾಚಿಸಿದರು.

ವೇದಿಕೆಯಲ್ಲಿ ಸಿಂಧನೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಚ್.ಎಫ್. ಮಸ್ಕಿ, ಡಾ. ಮಗದಪ್ಪ ಹಾಗೂ ಗೋಪಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಚುಟುಕು ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು, ಕಾಲೇಜಿನ ಉಪನ್ಯಾಸಕರು ಹಾಗೂ ನೂರಾರು ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

ಉಪನ್ಯಾಸಕ ಚಾಂದ್ ಪಾಷಾ ಸ್ವಾಗತಿಸಿದರು. ಆಂಗ್ಲ ಭಾಷಾ ಸಹಾಯಕ ಪ್ರಾಧ್ಯಾಪಕ ಮುದುಕಪ್ಪ ಕಾರ್ಯಕ್ರಮ ನಿರೂಪಿಸಿದರು. ಉಪನ್ಯಾಸಕ ಯರಿಯಪ್ಪ ವಂದಿಸಿದರು. ಇದೇ ಸಂದರ್ಭದಲ್ಲಿ ನಿವೃತ್ತ ಪ್ರೌಢಶಾಲಾ ಮುಖ್ಯ ಶಿಕ್ಷಕಿ ಅಡಿವೆಮ್ಮ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

# ಪ್ರೇಮ ವೈಫಲ್ಯ ಹಾಗೂ ನರವ್ಯೂಹದ ಸಂಬಂಧ




ತೀವ್ರವಾದ ಪ್ರೇಮ ವೈಫಲ್ಯದಿಂದ ಒದ್ದಾಡಿ ಬಳಲುತ್ತಿದ್ದ ಆತ ಸ್ವಾಮೀಜಿಯೊಬ್ಬರ ಬಳಿ ಈ ಕುರಿತು ತನ್ನ ಅಳಲನ್ನು ತೋಡಿಕೊಳ್ಳುತ್ತಾನೆ. ತುಸುವೇ ಮಂದಹಾಸವನ್ನು ತೋರಿದ ಸ್ವಾಮೀಜಿಗಳು ಆತನಿಗೆ ನೀನು ಪ್ರೀತಿಸುತ್ತಿರುವ ಹುಡುಗಿ ಈಗಾಗಲೇ ನಿನ್ನಿಂದ ದೂರವಾಗಿದ್ದಾಳೆ ಅಲ್ಲವೇ? ಆಕೆಯನ್ನು ನೀನು ತುಂಬು ಮನಸ್ಸಿನಿಂದ ಕ್ಷಮಿಸಿ ಬಿಡು ! ಎಂದು ಹೇಳುತ್ತಾರೆ.

ಇದು ಆತನಿಗೆ ತುಸು ಹೆಚ್ಚೇ ಕೋಪವನ್ನು ತರಿಸುತ್ತದೆ. ತನಗಾದ ನೋವಿಗೆ ಸಾಂತ್ವನವನ್ನು ಬಯಸಿ ಬಂದ ಆತ ಗುರುಗಳಿಂದ ಕ್ಷಮೆಯ ಮಾತನ್ನು ಕೇಳಿ ತುಸು ಬೇಸರದಿಂದ ಇದೇನು ಗುರುಗಳೇ ? ನಿಮ್ಮಂತಹ ಅಲೌಕಿಕರ ಬಳಿ ನಾನು ಬರಲೇಬಾರದಿತ್ತು ಎಂದು ನನಗೆ ಈಗ ತೋರಿಸುತ್ತಿದೆ. ನನಗೆ ಮೋಸ ಮಾಡಿ ನನ್ನಿಂದ ದೂರವಾದ ವ್ಯಕ್ತಿಯನ್ನು ಕ್ಷಮಿಸಲು ನೀವು ಹೇಳುತ್ತಿರುವಿರಿ ಇದು ತಪ್ಪಲ್ಲವೇ? ಎಂದು ಕೊಂಚ ಅಸಮಾಧಾನದಿಂದಲೇ ದನಿ ಎತ್ತರಿಸಿ ಹೇಳುತ್ತಾನೆ.

ನಿಧಾನವಾಗಿ ಆತನ ಕೋಪದ ಮಾತುಗಳನ್ನು ಆಲಿಸಿದ ಗುರುಗಳು ಮಗು ಆಕೆಯನ್ನು ಕ್ಷಮಿಸು ಎಂದು ನಾನು ಹೇಳುತ್ತಿರುವುದು ನಿನ್ನ ಮನಸ್ಸಿನ, ನಿನ್ನ ದೈಹಿಕ ಸಮಾಧಾನಕ್ಕಾಗಿ, ನಿನ್ನ ಭಾವನಾತ್ಮಕ ನೋವಿನ ಉಪಶಮನಕ್ಕಾಗಿ ಎಂದು ಆತನಿಗೆ ತಿಳಿ ಹೇಳುತ್ತಾರೆ.

ತುಸು ಅಚ್ಚರಿ ತುಂಬಿದ ದನಿಯಿಂದ ಆಕೆಯನ್ನು ಕ್ಷಮಿಸಿದರೆ ನನಗೆ ಹೇಗೆ ನೆಮ್ಮದಿ ದೊರೆಯುತ್ತದೆ ? ಎಂದು ಅಚ್ಚರಿಯಿಂದ ಕೇಳುತ್ತಾನೆ.

ಅದಕ್ಕೆ ಗುರುಗಳು ಪದೇಪದೇ ನೀನು ಆಕೆಯನ್ನು ಕ್ಷಮಿಸಿದ್ದೇನೆ ಎಂದು ಹೇಳಿಕೊಂಡಾಗ ಅದು ನಿನ್ನ ಮನಸ್ಸಿನ ಆಳದ ಒಳಹೊಕ್ಕು ಒಂದು ನಿರ್ಲಿಪ್ತ ಭಾವವನ್ನು ಸೃಷ್ಟಿಸುತ್ತದೆ. ಅಷ್ಟು ಸಾಕಲ್ಲವೇ? ನೀನು ಆಕೆಯನ್ನು ಕ್ಷಮಿಸಲು ಎಂದು ಆತನನ್ನು ಮರು ಪ್ರಶ್ನಿಸುತ್ತಾರೆ.

ನನ್ನ ಪ್ರೀತಿಗೆ ದ್ರೋಹ ಮಾಡಿದ ಆಕೆಯನ್ನು ನಾನು ಕ್ಷಮಿಸುವುದು ಅದೆಂದಿಗಾದರೂ ಸಾಧ್ಯವೇ? ಹಾಗೆ ಬಾಯಿ ಮಾತಿನಲ್ಲಿ ನಾನು ಪದೇಪದೇ ಆಕೆಯನ್ನು ಕ್ಷಮಿಸಿದ್ದೇನೆ ಎಂದು ಹೇಳುವುದಾದರೆ ಇದು ಒಂದು ರೀತಿಯಲ್ಲಿ ನನಗೆ ನಾನೇ ಮಾಡಿಕೊಳ್ಳುವ ಮೋಸ ಅಲ್ಲವೇ? ಎಂದು ಆ ಯುವಕ ಗೊಂದಲದಿಂದ ಕೇಳಿದನು.

ಅತ್ಯಂತ ಕನಿಕರ ಭಾವದಿಂದ ಗುರುಗಳು ಆತನನ್ನು ನೋಡುತ್ತಾ ಮಗು ಆಕೆಯನ್ನು ನೀನು ಪ್ರೀತಿಸುತ್ತಿರುವೆ ಎಂಬುದು ನಿನ್ನ ಮನಸ್ಸಿನ ಭಾವ. ಆಕೆ ನಿನ್ನನ್ನು ಪ್ರೀತಿಸುತ್ತಾಳೆ ಎಂಬುದು ಕೂಡ ಅಷ್ಟೇ ನಿಮ್ಮ ನಿಮ್ಮ ಸಾಮರ್ಥ್ಯಕ್ಕೆ ಅನುಗುಣವಾಗಿ ನೀವು ನಿಮ್ಮ ಪ್ರೀತಿಯನ್ನು ವ್ಯಕ್ತಪಡಿಸಿರುತ್ತೀರಿ. ಆಕೆಯ ಸಾಮರ್ಥ್ಯ ಮುಗಿದು ಹೋದ ಕಾರಣ ಆಕೆ ನಿನ್ನ ಪ್ರೀತಿಯನ್ನು ತಿರಸ್ಕರಿಸಿ ಬದುಕಿನಲ್ಲಿ ಮುಂದೆ ಸಾಗಿದ್ದಾಳೆ. ಆಕೆಯ ತಿರಸ್ಕಾರ ನಿನ್ನನ್ನು ಕಾಡುತ್ತಿದೆ ಆದ್ದರಿಂದಲೇ ನೀನು ನೋವು, ಹಟ, ಸಿಟ್ಟು, ದ್ವೇಷದಿಂದ ಬಳಲುತ್ತಿರುವೆ, ಪ್ರತೀಕಾರ ಭಾವ ನಿನ್ನಲ್ಲಿ ಉಳಿಸಿದರೂ ತಪ್ಪಿಲ್ಲ ಎಂಬಂತೆ ನಿನ್ನ ವರ್ತನೆ ಇದೆ. ಇದು ನಿನ್ನ ಮನೋದೈಹಿಕ ಆರೋಗ್ಯಕ್ಕೆ ಒಳ್ಳೆಯದಲ್ಲ... ಅಂತೆಯೇ ನೀನು ಕೂಡ ಬದುಕಿನಲ್ಲಿ ಮುಂದೆ ಸಾಗಬೇಕು. ಹಾಗೆ ಸಾಗಲು ನೀನು ಆಕೆಯನ್ನು ಮರೆಯಲೇಬೇಕಾದ ಅವಶ್ಯಕತೆ ಇದೆ... ಆದ್ದರಿಂದ ಆಕೆಯನ್ನು ಕ್ಷಮಿಸಿದ್ದೇನೆ ಎಂದು ನಿನಗೆ ನೀನೆ ಪದೇ ಪದೇ ಹೇಳಿಕೊಳ್ಳುವ ಮೂಲಕ ಆಕೆಯನ್ನು ನಿನ್ನ ಮನದ ಕೋಣೆಯಿಂದ ದೂರ ಮಾಡು ಎಂದು ಹೇಳಿದರು.

ನನಗೆ ಇದು ಅರ್ಥವಾಗುತ್ತಿಲ್ಲ ತುಸು ಬಿಡಿಸಿ ಹೇಳಬಾರದೇ ಗುರುಗಳೇ? ಎಂದು ಮತ್ತಷ್ಟು ಗೊಂದಲದಿಂದ ಆ ಯುವಕ ಕೇಳಿದ.

ತುಸುವೇ ನಗೆಯನ್ನು ಚೆಲ್ಲಿದ ಗುರುಗಳು ಮಗು ಆಕೆಯನ್ನು ಕ್ಷಮಿಸಿರುವೆ ಎಂದು ಪದೇಪದೇ ನೀನು ಹೇಳುವ ಮೂಲಕ ನಿನ್ನ ಮನದ ಗರ್ಭಗುಡಿಯಲ್ಲಿ ಆಕೆಗೆ ಕೊಟ್ಟಿರುವ ಸ್ಥಾನದಿಂದ ಆಕೆಯನ್ನು ದೂರ ಮಾಡುವೆ. ಒಂದು ವಿಷಯವನ್ನು ನಿರಂತರವಾಗಿ ನೆನಪಿಸಿದಾಗ ಅದು ನಮ್ಮಲ್ಲಿ ಶಾಶ್ವತವಾಗಿ ಮನೆ ಮಾಡುತ್ತದೆ ಅಲ್ಲವೇ? ಹಾಗೆಯೇ ಆಕೆಯನ್ನು ನೀನು ಕ್ಷಮಿಸಿರುವೆ ಎಂಬ ನಿನ್ನ ಮನದ ಮಾತು ನಿನ್ನ ದೇಹದ ನರ ನಾಡಿಗಳಲ್ಲೂ ತುಂಬಿ ನಿನ್ನ ಒಳ ಮನಸಲ್ಲಿ ಆಕೆಯ ಕುರಿತ ವಿಷಮ ಭಾವನೆಗಳನ್ನು ಇಲ್ಲವಾಗಿಸುತ್ತದೆ.

ಇದನ್ನು ಅರಿಯಲು ನೀನು ನಮ್ಮ ನರಮಂಡಲದ ವ್ಯವಸ್ಥೆಯನ್ನು ಕೂಡ ಅರಿಯಬೇಕು. ಮನೋವಿಜ್ಞಾನದ ಪರಿಭಾಷೆಯಲ್ಲಿ ನ್ಯೂರೊ ಪ್ಲಾಸ್ಟಿಸಿಟಿ ಎಂಬ ಹೆಸರನ್ನು ನೀವು ಕೇಳಿರಬಹುದು. ನಿನ್ನ ದೈನಂದಿನ ಬದುಕಿನಲ್ಲಿ ನೀನು ನೋಡುವ ಮಾತನಾಡುವ ಭಾಗವಹಿಸುವ ಕ್ರಿಯೆಗಳು ನಿನ್ನಲ್ಲಿ ಒಂದು ಮಾನಸಿಕ ಮಾರ್ಗವನ್ನು ಸೃಷ್ಟಿಸುತ್ತದೆ. ಬಹಳಷ್ಟು ಸಮಯದವರೆಗೆ ಆ ಮಾರ್ಗದಲ್ಲಿ ನಿನ್ನನ್ನು ನೀನು ರೂಢಿಸಿಕೊಂಡಾಗ ಆ ಮಾರ್ಗವೇ ನೀನು ಎಂದು ನಿನ್ನ ಕುರಿತು ನೀನು ಪರಿಕಲ್ಪನೆ ಮಾಡಿಕೊಳ್ಳುವೆ.

ಉದಾಹರಣೆಗೆ ಪ್ರತಿದಿನ ಬೇಗನೆ ಎದ್ದು ತನ್ನೆಲ್ಲ ಕೆಲಸಗಳನ್ನು ತಾನು ಮಾಡಿಕೊಳ್ಳುವ ವ್ಯಕ್ತಿ ಸಮಯಕ್ಕೆ ಸರಿಯಾಗಿ ಕರ್ತವ್ಯ ನಿರ್ವಹಿಸುವ ವ್ಯಕ್ತಿ ತನ್ನನ್ನು ತಾನು ಶಿಸ್ತಿನ ಪರಿಪಾಲಕ ಎಂದುಕೊಳ್ಳಲು ಕಾರಣ ಆತನ ದೇಹ ಮತ್ತು ಮನಸ್ಸುಗಳು ಆ ರೀತಿಯ ಒಂದು ಕ್ರಿಯೆಗೆ ಬಹಳ ದಿನಗಳ ತಿಂಗಳುಗಳ ವರ್ಷಗಳ ಕಾಲ ಕಾರ್ಯ ನಿರ್ವಹಿಸಿರುತ್ತವೆ.... ತನಗೆ ಗೊತ್ತಿಲ್ಲದೆ ಆ ರೀತಿಯ ಒಂದು ಮಾನಸಿಕ ಕಟ್ಟಳೆಗೆ ಒಳಗಾಗುತ್ತಾನೆ. ಇದೊಂದು ನರವ್ಯೂಹದ ರಾಜಮಾರ್ಗ ನಮ್ಮ ದೇಹದ ನರಮಂಡಲವು ನಾವೇನು ಮಾಡುತ್ತೇವೆ ಅದನ್ನು ಒಪ್ಪಿಕೊಂಡು ಮುಂದೆ ಸಾಗುತ್ತದೆ.

ಹಾಗಾದರೆ ಇದು ನಮಗೆ ನಾವು ಮಾಡಿಕೊಳ್ಳುವ ದ್ರೋಹ ಅಲ್ಲವೇ? ಎಂದು ಆ ಯುವಕ ಕೇಳಿದ.

ಖಂಡಿತವಾಗಿಯೂ ಅಲ್ಲ... ಅನವಶ್ಯಕವಾಗಿ ನಮ್ಮ ಮನದಲ್ಲಿ ಬೇರೊಬ್ಬರಿಗೆ ಜಾಗ ಕೊಡುವ ಅವಶ್ಯಕತೆ ಇರುವುದಿಲ್ಲ.. ಇಲ್ಲಿಯವರೆಗೂ ನೀನು ಪ್ರೀತಿಸುತ್ತಿದ್ದ ಹೆಣ್ಣು ಮಗಳನ್ನು ನೀನು ನಿನ್ನ ಮನಸ್ಸಿನಲ್ಲಿಯೇ ಕೋಪದಿಂದ ಕೂರಿಸಿಕೊಂಡಿದ್ದರೂ ಪ್ರತಿದಿನ ನಿನ್ನ ಮನದ ಎಲ್ಲ ಚಿಂತನೆಗಳಲ್ಲಿ, ವಿಚಾರಗಳಲ್ಲಿ ಆಕೆಯ ಹಾಜರಾತಿಯನ್ನು ನೀನು ಕಾಣುವೆ.ಅಲ್ಲೊಂದು ವಿಚಾರಣಾ ವೇದಿಕೆಯನ್ನು ಸೃಷ್ಟಿಸಿ ತಪ್ಪು ಸರಿಗಳ ಕುರಿತು

ಯೋಚಿಸುವೆ. ಅಂತಿಮವಾಗಿ ನಿನ್ನನ್ನು ನೀನು ಅಮಾಯಕ ಎಂದು ಆಕೆಯನ್ನು ದೋಷಿ ಎಂದು ಪರಿಗಣಿಸುವೆ ಇದು ನಿನ್ನದೇ ಮನಸ್ಸಿಗೆ ನೀನು ಕೊಟ್ಟುಕೊಳ್ಳುವ ಶಿಕ್ಷೆ.... ಆದರೆ ಒಂದೊಮ್ಮೆ ನೀನು ಆಕೆಯನ್ನು ಕ್ಷಮಿಸಿದರೆ ಹಾಗೂ ನಿಮ್ಮಿಬ್ಬರ ನಡುವಿನ ಬಿರುಕನ್ನು ಒಪ್ಪಿಕೊಂಡು ಆಕೆಯ ಪರಿಸ್ಥಿತಿಯನ್ನು ಅರ್ಥ ಮಾಡಿಕೊಂಡಂತೆ ಭಾವಿಸಿ ಕ್ಷಮಿಸಿರುವ ನಿನ್ನ ಬಾಹ್ಯಕ್ರಿಯೆ ನಿನ್ನ ಅಂತರಾಳದಲ್ಲಿ ಒಂದು ಸಂಚಲನವನ್ನು ಸೃಷ್ಟಿಸಿ ನಿನ್ನ ಮನದ ಕೋಣೆಯಿಂದ ಆಕೆಯನ್ನು ನಿಧಾನವಾಗಿ ಹೊರ ಹಾಕುತ್ತದೆ. ಹಾಗೆಂದು ಆಕೆಯನ್ನು ಸಂಪೂರ್ಣವಾಗಿ ಮರೆಯಲು ನಿನಗೆ ಸಾಧ್ಯವಾಗದೇ ಹೋದರೂ ನಿನ್ನ ಮನದ ಕೋಣೆಯಲ್ಲಿ ಆಕೆ ಎಂದೋ ಮಿನುಗುವ ನಕ್ಷತ್ರವಾಗಿ ಮಧುರ ನೆನಪಾಗಿ ಸುಳಿಯುತ್ತಾಳೆಯೇ ಹೊರತು ವಿಷಾದದ ಭಾವವನ್ನು ಸೃಷ್ಟಿಸುವುದಿಲ್ಲ ಎಂದು ನಿಧಾನವಾಗಿ ಒಂದೊಂದೇ ಪದಗಳನ್ನು ತೂಗಿ ಹೇಳಿದರು.

ಅರ್ಥವಾಯಿತು ಎಂಬಂತೆ ತಲೆಯಾಡಿಸಿದ ಯುವಕನ ಮೊಗದಲ್ಲಿ ನೆಮ್ಮದಿಯ ಭಾವ ತುಂಬಿದ್ದರೆ ಮನಸ್ಸು ಸಂಪೂರ್ಣವಾಗಿ ಹಗುರಾಗಿತ್ತು.

ಹೌದಲ್ಲವೇ ಸ್ನೇಹಿತರೆ ! ಇದನ್ನೇ ಆಧುನಿಕರ ಭಾಷೆಯಲ್ಲಿ ಮೂವ್ ಆನ್ ಆಗುವುದು ಎಂದು ಹೇಳುತ್ತಾರೆ. ಇದ್ದಷ್ಟು ದಿನ ಮಾತ್ರ ನಾನು ನನ್ನದು ನನ್ನಿಂದ ಎಂಬ ಭಾವ ನಮ್ಮಲ್ಲಿ ಇರುತ್ತದೆ. ಒಂದೊಮ್ಮೆ ಆ ಭಾವ ಕಳಚಿ ಹೋದಾಗ ಮನಸ್ಸಿಗೆ ನೋವಾಗುವುದು ಸಹಜ ಮತ್ತೆ ಕೆಲವೊಮ್ಮೆ ಆಗಸವೇ ಕಳಚಿ ತಲೆ ಮೇಲೆ ಬಿದ್ದಂತ ಭಾವ.

ಪ್ರೀತಿಸುವ ಸಮಯದಲ್ಲಿ ಎಲ್ಲವೂ ಸುಂದರ ಬಂಧುರ ಎಂದು ನಿಮಗೆ ತೋರುತ್ತದೆ ಒಂದೊಮ್ಮೆ ಅದು ವಿಫಲವಾದಾಗ ನೀವು ಬೇಸರಗೊಳ್ಳುವುದು ಸಹಜ. ಆದರೆ ಪದೇ ಪದೇ ಅದೇ ವಿಷಯವನ್ನು ಅದೇ ವ್ಯಕ್ತಿಯನ್ನು ನೀವು ನಿಮ್ಮ ಮನದ ನ್ಯಾಯಾಲಯದ ವಾದ ವಿವಾದಗಳನ್ನು ನಿಮಗೆ ನಿಮ್ಮ ಪರವಾಗಿ ಮಾಡುತ್ತಾ ಹೋಗುತ್ತೀರಿ. ಅದೊಂದು ನಿಯತಿಯಾಗಿ ತೋರುತ್ತದೆ, ಆ ನಿಯತಿಯೇ ನಿಮ್ಮನ್ನು ಆ ವ್ಯಕ್ತಿ ಎಂಬಂತೆ ಭಾಸವಾಗಲು ಅವಕಾಶ ಮಾಡಿಕೊಡುತ್ತದೆ. ಒಂದೊಮ್ಮೆ ಅವರನ್ನು ಕ್ಷಮಿಸಿದಾಗ ಆ ಕ್ಷಮೆ ಅವರಿಗೆ ತಲುಪುತ್ತದೆಯೋ ಇಲ್ಲವೋ ಗೊತ್ತಿಲ್ಲ ಆದರೆ ಕ್ಷಮಿಸಿದ ನಂತರದ ನಿರಾಳ ಭಾವ ನಿಮ್ಮದಾಗುತ್ತದೆ. ನಿಧಾನವಾಗಿ ಅವರು ನಿಮ್ಮ ಮನದ ಪರದೆಯಿಂದ ಮಾಯವಾಗುತ್ತಾ ಹೋಗುತ್ತಾರೆ. ಈ ರೀತಿ ಮಾಡುವ ಮೂಲಕ ನಿಮ್ಮ ಪ್ರೀತಿಯ ಕುರಿತಾದ, ಪ್ರೀತಿಸುವ ವ್ಯಕ್ತಿಯ ಕುರಿತಾದ ಭಾವಗಳನ್ನು ಕಿತ್ತುಹಾಕಿ ಮರುಜೋಡಣೆ ಮಾಡಿಕೊಳ್ಳುತ್ತೀರಿ.

ನಿಮ್ಮ ಮನೆಯಲ್ಲಿ ಮೇಲಿನ ಪದರ ಕಿತ್ತು ಹೋಗಿರುವ ಶಾಕ್ ಹೊಡೆಯುತ್ತಿರುವ ವಿದ್ಯುತ್ತಿನ ತಾಮ್ರದ ತಂತಿಯ ಆದಷ್ಟು ಭಾಗವನ್ನು ಕತ್ತರಿಸಿ ತೆಗೆದು ಮತ್ತೆ ಇನ್ಸುಲೇಶನ್ ಟೇಪ್ನಿಂದ ಅಂಟಿಸಿ ಮಾಡುವ ಹಾಗೆಯೇ ಇದು ಕೂಡ. ಪದೇ ಪದೇ ಶಾಕ್ ಹೊಡೆಸಿಕೊಳ್ಳುವುದರ ಬದಲಾಗಿ ಆ ಭಾಗವನ್ನು ಕತ್ತರಿಸಿ ತೆಗೆಯುವ ಹಾಗೆಯೇ ಮನದ ಕೋಣೆಯಿಂದಲೂ ಪ್ರೀತಿಸಿದ ಜೀವಿಯ ಕಡೆಯಿಂದ ನಿಮಗಾದ ದ್ರೋಹವನ್ನು ಕತ್ತರಿಸಿ ತೆಗೆಯುವುದು ಒಳಿತಲ್ಲವೇ?

ಈ ಮಾತು ಕೇವಲ ಪ್ರೀತಿ ಪ್ರೇಮಕ್ಕೆ ಮಾತ್ರ ಸಂಬಂಧಿಸಿಲ್ಲ ಬದಲಾಗಿ ನಮ್ಮ ಬದುಕಿನ ಎಲ್ಲಾ ವಿಚಾರಗಳಿಗೂ ಸಂಬಂಧಿಸಿದ್ದಾಗಿದೆ . ಉದಾಹರಣೆಗೆ ವೈದ್ಯಕೀಯ ಶಿಕ್ಷಣ ಪಡೆದು ಸಮಾಜದಲ್ಲಿ ಗುರುತಿಸಿಕೊಳ್ಳಬೇಕೆಂದು ಬಯಸುವ ಪ್ರತಿಯೊಬ್ಬ ವಿದ್ಯಾರ್ಥಿಯ ಕನಸು ನನಸಾಗುವುದಿಲ್ಲ. ಸರಿಸುಮಾರು ನಾಲ್ಕು ಲಕ್ಷಕ್ಕೂ ಹೆಚ್ಚು ಜನ ಲೋಕ ಸೇವಾ ಆಯೋಗದ ಪರೀಕ್ಷೆಗಳಿಗೆ ಕುಳಿತುಕೊಳ್ಳುತ್ತಾರೆ ಆದರೆ ಅದರಲ್ಲಿ ಕೇವಲ 400 ಜನ ಆಯ್ಕೆಯಾಗುತ್ತಾರೆ ಅಲ್ಲಿ ಕಲಿತ ವಿಷಯಗಳನ್ನು ಅವರು ತಮ್ಮ ಮುಂದಿನ ಬದುಕಿಗೆ ದಾರಿ ದೀಪವಾಗಿಸಿಕೊಳ್ಳಬೇಕೇ ಹೊರತು ಅದೊಂದು ದಾರಿ ಮುಚ್ಚಿ ಹೋಯಿತು ಎಂದು ಅಳುತ್ತ ಕೂರುವುದಾಗಲೀ, ಆತ್ಮಹತ್ಯೆ ಮಾಡಿಕೊಳ್ಳುವುದಾಗಲಿ ಅಲ್ಲ.

ಈ ಪ್ರಪಂಚದಲ್ಲಿ ಹುಟ್ಟಿದ ಪ್ರತಿಯೊಬ್ಬ ಮನುಷ್ಯ ದೀಕ್ಷಾ ವೃತ್ತಿಯಿಂದ ಶ್ರೀಮಂತಿಕೆಯ ತುತ್ತ ತುದಿಯನ್ನು ತಲುಪುವವರೆಗೆ ದುಡಿಯುತ್ತಲೇ ಇರುತ್ತಾನೆ.... ಮನಸ್ಸಿಗೆ ನೆಮ್ಮದಿ ಕೊಡುವ ಬದುಕಿಗೆ ಅರ್ಥವನ್ನು ನೀಡುವ ಯಾವುದೇ ಒಂದು ಉದ್ಯೋಗ ಕೌಟುಂಬಿಕ ನೆಮ್ಮದಿ ಸಾಮಾಜಿಕ ಬದುಕು ನಿಮ್ಮದಾದರೆ ಅದಕ್ಕಿಂತ ಮತ್ತಿನ್ನೇನು ಬೇಕು?

'ಇರಬೇಕು ಇರುವಂತೆ ತೊರೆದು ಸಾವಿರ ಚಿಂತೆ,
ಮಳೆ ಸುರಿಸಿ ಹಗುರಾದ ಮುಗಿಲಿನಂತೆ '

ಎಂಬ ಕವಿಯ ಕವನದ ಸಾಲುಗಳನ್ನು ನೆನಪಿಸಿಕೊಳ್ಳಿ.

ಬದುಕಿನಲ್ಲಿ ಬರುವ ಎಲ್ಲವನ್ನು ನಮ್ಮದಾಗಿಸಿಕೊಳ್ಳುವ ಭರದಲ್ಲಿ ಕೆಲವೊಮ್ಮೆ ಕೆಲವೊಂದು ವಿಷಯಗಳು ನಮಗೆ ನಿಲುಕುವುದಿಲ್ಲ. ಅಂತಹ ನಿಲುಕದ ನಕ್ಷತ್ರಕ್ಕೆ ಕೈ ಹಾಕುವುದಕ್ಕಿಂತ ನಮಗೆ ಕೈಯಳತೆ ದೂರದಲ್ಲಿರುವ ಹೂವಿನಿಂದ ತೃಪ್ತರಾಗುವುದು ಒಳ್ಳೆಯದು ಅಲ್ಲವೇ?

ಏನಂತೀರಾ ಸ್ನೇಹಿತರೆ ?

ತುಂಗ ಬಿಂಬ

**-ವೀಣಾ ಹೇಮಂತ್ ಗೌಡ ಪಾಟೀಲ್**
ಮುಂಡರಗಿ ಗದಗ್

# ಗಣೇಶೋತ್ಸವ ಹಿನ್ನೆಲೆ: ಎಸ್‌ಪಿ ಅರುಣಾಂಗ್ಷು ಗಿರಿ ನೇತೃತ್ವದಲ್ಲಿ ಮಾನ್ವಿಯಲ್ಲಿ ಪಥ ಸಂಚಲನ



ಮಾನ್ವಿ: ಪಟ್ಟಣದಲ್ಲಿ ಗಣೇಶೋತ್ಸವದ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಅವರ ನೇತೃತ್ವದಲ್ಲಿ ಪ್ರಮುಖ ಬೀದಿಗಳು ಹಾಗೂ ವಿವಿಧ ವಾರ್ಡ್‌ಗಳಲ್ಲಿ ಪೊಲೀಸ್ ಇಲಾಖೆಯಿಂದ ಪಥ ಸಂಚಲನ ನಡೆಸಲಾಯಿತು.

ಗಣೇಶೋತ್ಸವದ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವುದು, ಸಾರ್ವಜನಿಕರಲ್ಲಿ ಸುರಕ್ಷತೆಯ ಭಾವನೆ ಮೂಡಿಸುವುದು ಹಾಗೂ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದಿರುವ ಉದ್ದೇಶದಿಂದ ಈ ಪಥ ಸಂಚಲನ ಹಮ್ಮಿಕೊಳ್ಳಲಾಗಿತ್ತು.

ಪಥ ಸಂಚಲನದ ನಂತರ ಪಟ್ಟಣದಲ್ಲಿ ಗಣೇಶ ಮೂರ್ತಿಗಳ ವಿಸರ್ಜನೆ ನಡೆಯುವ ಹಿರೇಬಾವಿ ಪ್ರದೇಶಕ್ಕೆ ಭೇಟಿ ನೀಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಅವರು ಅಲ್ಲಿನ ಭದ್ರತಾ ವ್ಯವಸ್ಥೆಯನ್ನು ಪರಿಶೀಲಿಸಿದರು. ಜೊತೆಗೆ ಪಟ್ಟಣದ ಅತಿಸೂಕ್ಷ್ಮ ಪ್ರದೇಶಗಳಿಗೂ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಿದರು.

ಈ ಸಂದರ್ಭದಲ್ಲಿ ಸಿಂಧನೂರು ಗ್ರಾಮೀಣ ವಿಭಾಗದ ಡಿವೈಎಸ್‌ಪಿ ಚಂದ್ರಶೇಖರ, ಮಾನ್ವಿ ಪೊಲೀಸ್ ಠಾಣೆಯ ಪಿಐ ಸೋಮಶೇಖರ ಎಸ್. ಕೆಂಚರೆಡ್ಡಿ ಸೇರಿದಂತೆ ವಿವಿಧ ಪೊಲೀಸ್ ಅಧಿಕಾರಿಗಳು ಹಾಗೂ ನೂರಾರು ಪೊಲೀಸ್ ಸಿಬ್ಬಂದಿ ಪಥ ಸಂಚಲನದಲ್ಲಿ ಭಾಗವಹಿಸಿದ್ದರು.

# ಸೆಂಟ್ ಮೇರಿ ಚರ್ಚ್‌ನಲ್ಲಿ ಮೇರಿಮಾತೆಯ ಜಾತ್ರಾ ಮಹೋತ್ಸವ



ಮಾನ್ವಿ: ಪಟ್ಟಣದ ಕೋನಾಪುರಪೇಟೆಯ ಸೆಂಟ್ ಮೇರಿ ಚರ್ಚ್‌ನಲ್ಲಿ ಮೇರಿಮಾತೆಯ ಜಾತ್ರಾ ಮಹೋತ್ಸವವನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಜಾತ್ರಾ ಮಹೋತ್ಸವದ ಅಂಗವಾಗಿ ಶಾಸಕ ಹಂಪಯ್ಯ ನಾಯಕ ಅವರು ಸೆಂಟ್ ಮೇರಿ ಚರ್ಚ್‌ಗೆ ಭೇಟಿ ನೀಡಿ, ಚರ್ಚ್‌ನ ಫಾದರ್ ಸುರೇಶ್ ವಿನ್ಸೆಂಟ್ ಅವರನ್ನು ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹಾಗೂ ನಯೋಪ್ರ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ತಾಲೂಕು ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಕೆ. ಅಮರೇಶಪ್ಪ ವಕೀಲರು, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಕಿರಲಿಂಗಪ್ಪ ಕವಿತಾಳ, ಜಯಪ್ರಕಾಶ್, ವಿಜಯಕುಮಾರ್, ಅನಿಲ್ ಕುಮಾರ್, ರವಿ ಪುಟ್ಟು, ಮಲ್ಲೇಶಿ ಜಗಲಿ, ಶಂಕರ್ ಜಗಲಿ, ಶಿವರಾಜ್ ಜಾನೇಕಲ್, ಸತ್ತಾರ್ ಬಂಗ್ಲೆವಾಲೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ದೇವದುರ್ಗದಲ್ಲಿ ಶರಣ ದಾಸಿಮಯ್ಯ ಜಯಂತಿ ಆಚರಣೆ



ದೇವದುರ್ಗ: ಪಟ್ಟಣದ ಶ್ರೀ ಶಂಭುಲಿಂಗೇಶ್ವರ ದೇವಸ್ಥಾನದಲ್ಲಿ ಸಿಂಪಿ (ವೀರಶೈವ ಲಿಂಗಾಯತ) ಸಮಾಜದ ವತಿಯಿಂದ ಶರಣ ದಾಸಿಮಯ್ಯ ಜಯಂತಿಯನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀ ಕ್ವಾಟಿ ಸೋಗುರೇಶ್ವರ ಸ್ವಾಮೀಜಿ ಪೂಜಾ ಕಾರ್ಯಕ್ರಮ ನೆರವೇರಿಸಿ, ಸಭೆಯನ್ನು ಉದ್ದೇಶಿಸಿ ಆಶೀರ್ವಚನ ನೀಡಿದರು. ಬಳಿಕ ಭಕ್ತರಿಗೆ ಪ್ರಸಾದ ವಿತರಣೆ ಹಾಗೂ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಿತು.

ಸಿಂಪಿ ಸಮಾಜದ ಅಧ್ಯಕ್ಷ ವೀರಭದ್ರ ನಾಗಲಿಕರ್ ಮಾತನಾಡಿ, ಸಮಾಜದ ಒಗ್ಗಟ್ಟು, ಸಂಘಟನೆ ಮತ್ತು ಏಕತೆಯ ಮಹತ್ವವನ್ನು ವಿವರಿಸಿ, ಸಮುದಾಯದ ಅಭಿವೃದ್ಧಿಗೆ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಶಾಬಾದಿ, ಶಾಂತಕುಮಾರ್ ಮುಂಡರಿಗೆ, ಮಹಾಮುನಿಯಪ್ಪ ಶಾಬಾದಿ, ವೀರೇಶ್ ಮಸ್ಕಿ, ಚಂದ್ರಶೇಖರ್ ನಾಗಲಿಕರ್, ಬಸವ ಮುಂಡರಿಗೆ, ಸಿದ್ರಾಮಪ್ಪ ಬಣಗಾರ್ ಮಾನ್ವಿ ಸೇರಿದಂತೆ ಸಮಾಜದ ಹಿರಿಯರು, ಮುಖಂಡರು ಹಾಗೂ ಬಂಧುಗಳು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಹಕರಿಸಿದ ಸಿಂಪಿ ಸಮಾಜದ ಎಲ್ಲಾ ಸದಸ್ಯರು ಹಾಗೂ ಬಂಧುಗಳಿಗೆ ಆಯೋಜಕರು ಕೃತಜ್ಞತೆ ಸಲ್ಲಿಸಿದರು.

# ತಿರುಪತಿಗೆ ಪಾದಯಾತ್ರೆ ಮೂಲಕ ಹೊರಟ ಶ್ರೀ ವೆಂಕಟೇಶ್ವರಸ್ವಾಮಿ ದೇವಸ್ಥಾನದ ಅರ್ಚಕರು



ಮಾನ್ವಿ: ತಾಲೂಕಿನ ಸಂಗಾಪುರ ಗ್ರಾಮದ ಶ್ರೀ ವೆಂಕಟೇಶ್ವರಸ್ವಾಮಿ ದೇವಸ್ಥಾನದಲ್ಲಿ ಪ್ರತಿವರ್ಷದಂತೆ ತಿರುಪತಿ ಶ್ರೀ ವೆಂಕಟೇಶ್ವರಸ್ವಾಮಿ ದೇವಸ್ಥಾನದಲ್ಲಿ ನಡೆಯುವ ಬ್ರಹ್ಮೋತ್ಸವದಲ್ಲಿ ಭಾಗವಹಿಸುವ ಉದ್ದೇಶದಿಂದ ಪಾದಯಾತ್ರೆ ಕೈಗೊಳ್ಳಲಾಯಿತು.

ಈ ಹಿನ್ನೆಲೆಯಲ್ಲಿ ಶನಿವಾರ ದೇವಸ್ಥಾನದಲ್ಲಿ ವಿಶೇಷ ಪೂಜೆ ನೆರವೇರಿಸಲಾಯಿತು. ಶ್ರೀ ವೆಂಕಟೇಶ್ವರಸ್ವಾಮಿಗೆ ಅಭಿಷೇಕ, ಮಹಾಮಂಗಳಾರತಿ ಸೇರಿದಂತೆ ವಿವಿಧ ಧಾರ್ಮಿಕ ಪೂಜೆಗಳನ್ನು ಸಲ್ಲಿಸಲಾಯಿತು. ಹರಕೆ ಹೊತ್ತ ಭಕ್ತರು ದೀರ್ಘ ನಮಸ್ಕಾರ, ಜ್ಯೋತಿ ಹೊರುವುದು ಸೇರಿದಂತೆ ವಿವಿಧ ಹರಕೆಗಳನ್ನು ತೀರಿಸಿದರು.

ಸಂಜೆ ದೇವಸ್ಥಾನದ ಅರ್ಚಕರಾದ ಹನುಮಪ್ಪ ಪೂಜಾರಿ ಹಾಗೂ ತಿಮ್ಮಯ್ಯ ಪೂಜಾರಿ ಅವರು ದೇವಸ್ಥಾನದಲ್ಲಿ ಬೆಳ್ಳಿ ಬೆತ್ತ, ಏಕನಾಥ ಕಾಯಿ ಹಾಗೂ ಗೋಪಾಳ ಪುಟ್ಟಿಗೆ ವಿಶೇಷ ಪೂಜೆ ಸಲ್ಲಿಸಿ, ಅವುಗಳನ್ನು ಕೈಯಲ್ಲಿ ಹಿಡಿದು ತಿರುಪತಿಯಲ್ಲಿ ನಡೆಯುವ ಬ್ರಹ್ಮೋತ್ಸವದಲ್ಲಿ ಭಾಗವಹಿಸಲು ಪಾದಯಾತ್ರೆ ಮೂಲಕ ಪ್ರಯಾಣ ಬೆಳೆಸಿದರು.

ಗ್ರಾಮದ ಭಕ್ತರು ಛತ್ರಚಾಮರ ಹಾಗೂ ಮಂಗಳವಾದ್ಯಗಳೊಂದಿಗೆ ಅರ್ಚಕರನ್ನು ಗ್ರಾಮದ ಹೊರವಲಯದಲ್ಲಿರುವ ಶ್ರೀ ವೆಂಕಟೇಶ್ವರಸ್ವಾಮಿ ಪಾದಗಟ್ಟೆಯವರೆಗೆ ಕರೆತಂದು, ಅಲ್ಲಿ ವಿಶೇಷ ಪೂಜೆ ಸಲ್ಲಿಸಿ ಬೀಳ್ಕೊಟ್ಟರು.

ಅರ್ಚಕರು ಪಾದಯಾತ್ರೆ ಮೂಲಕ ಮಾನ್ವಿ, ರಂಗದಾಳ್ ಹಾಗೂ ಮದ್ಲಾಪುರ ಮಾರ್ಗವಾಗಿ ತೆರಳಿ, ತುಂಗಭದ್ರಾ ನದಿಯಲ್ಲಿ ಗಂಗಾ ಪೂಜೆ ಸಲ್ಲಿಸಿದ ಬಳಿಕ ತಿರುಪತಿಯತ್ತ ಪ್ರಯಾಣ ಮುಂದುವರಿಸಿದರು.

# ಹೊಸೂರು ಸಿದ್ದಾಪುರದಲ್ಲಿ ಶ್ರೀ ದುರ್ಗಾದೇವಿ ಪಲ್ಲಕ್ಕಿ ಉತ್ಸವ ವಿಜೃಂಭಣೆಯಿಂದ ಆಚರಣೆ



ಜಾಲಹಳ್ಳಿ, ಸೆ.13: ಸಮೀಪದ ಹೊಸೂರು ಸಿದ್ದಾಪುರ ಗ್ರಾಮದಲ್ಲಿ ಶ್ರಾವಣ ಮಾಸದ ಅಂಗವಾಗಿ ಗ್ರಾಮದ ಆರಾಧ್ಯ ದೇವತೆ ಶ್ರೀ ದುರ್ಗಾದೇವಿಯ ಪಲ್ಲಕ್ಕಿ ಉತ್ಸವವು ವಿವಿಧ ಧಾರ್ಮಿಕ ವಿಧಿವಿಧಾನಗಳೊಂದಿಗೆ ಭಕ್ತಿಭಾವದಿಂದ ಹಾಗೂ ವಿಜೃಂಭಣೆಯಿಂದ ನಡೆಯಿತು.

ಉತ್ಸವದ ಅಂಗವಾಗಿ ಸೆ.11ರಂದು ಶ್ರೀ ದುರ್ಗಾದೇವಿಯ ಪಲ್ಲಕ್ಕಿಯನ್ನು ಕೃಷ್ಣಾ ನದಿಗೆ ಕೊಂಡೊಯ್ದು ಗಂಗಾಸ್ನಾನ ನೆರವೇರಿಸಲಾಯಿತು. ಭಕ್ತರು ಪಲ್ಲಕ್ಕಿಯೊಂದಿಗೆ ತೆರಳಿ ನದಿಯಲ್ಲಿ ವಿಶೇಷ ಪೂಜೆ ಸಲ್ಲಿಸಿ ದೇವಿಯ ಆಶೀರ್ವಾದ ಪಡೆದರು.

ಸೆ.12ರಂದು ಮಧ್ಯರಾತ್ರಿ 12 ಗಂಟೆಗೆ ಶ್ರೀ ದುರ್ಗಾದೇವಿಯ ಪಲ್ಲಕ್ಕಿಯನ್ನು ಗ್ರಾಮದ ದೇವಸ್ಥಾನದ ಕಟ್ಟೆಯ ಮೇಲೆ ಪ್ರತಿಷ್ಠಾಪಿಸಲಾಯಿತು. ಈ ಸಂದರ್ಭದಲ್ಲಿ ಭಕ್ತರು ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ರಾತ್ರಿ ವೇಳೆಯಲ್ಲಿಯೂ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡು ದೇವಿಯ ಸೇವೆಯಲ್ಲಿ ಭಾಗಿಯಾದರು.

ಸೆ.13ರಂದು ಪಲ್ಲಕ್ಕಿಯು ಹೊಸೂರು ಸಿದ್ದಾಪುರದ ಶ್ರೀ ಆಂಜನೇಯ ದೇವಸ್ಥಾನಕ್ಕೆ ಆಗಮಿಸಿತು. ದೇವಸ್ಥಾನದ ಮುಂಭಾಗದಲ್ಲಿ ಡೊಳ್ಳು, ಭಜನೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಭಕ್ತರು ದೇವಿಯನ್ನು ಸ್ವಾಗತಿಸಿದರು.

ಸಂಜೆ 5ರಿಂದ 6 ಗಂಟೆಯ ವೇಳೆಗೆ ಶ್ರೀ ದುರ್ಗಾದೇವಿಯ ಪಲ್ಲಕ್ಕಿಯನ್ನು ಡೊಳ್ಳು ಹಾಗೂ ಭಜನೆಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಭವ್ಯ ಮೆರವಣಿಗೆ ಮೂಲಕ ಕೊಂಡೊಯ್ಯಲಾಯಿತು. ಮೆರವಣಿಗೆಯಲ್ಲಿ ಮಹಿಳೆಯರು, ಮಕ್ಕಳು, ಯುವಕರು ಹಾಗೂ ಹಿರಿಯರು ಸೇರಿದಂತೆ ಅಪಾರ ಸಂಖ್ಯೆಯ ಗ್ರಾಮಸ್ಥರು ಭಾಗವಹಿಸಿದ್ದರು.

ಭಕ್ತರ ಜಯಘೋಷ, ಡೊಳ್ಳಿನ ನಾದ ಹಾಗೂ ಭಜನೆಯ ಸದ್ದಿನಿಂದ ಗ್ರಾಮದ ಪ್ರಮುಖ ಬೀದಿಗಳು ಭಕ್ತಿಮಯ ವಾತಾವರಣದಿಂದ ಕಂಗೊಳಿಸಿದವು. ಬಳಿಕ ಪಲ್ಲಕ್ಕಿಯನ್ನು ದೇವಸ್ಥಾನಕ್ಕೆ ಕರೆತಂದು ವಿಶೇಷ ಪೂಜೆ ಹಾಗೂ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು.

ಶ್ರೀ ದುರ್ಗಾದೇವಿಯ ಪೂಜಾರಿ ಪಿಡ್ಡಪ್ಪ ಪೂಜಾರಿ ಅವರು ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿದರು.

ಶ್ರಾವಣ ಮಾಸದ ಅಂಗವಾಗಿ ನಡೆದ ಪಲ್ಲಕ್ಕಿ ಉತ್ಸವವು ಗ್ರಾಮಸ್ಥರಲ್ಲಿ ಭಕ್ತಿ, ಸೌಹಾರ್ದತೆ ಹಾಗೂ ಒಗ್ಗಟ್ಟಿನ ಭಾವನೆ ಮೂಡಿಸಿತು. ಗ್ರಾಮದ ಹಿರಿಯರು, ಮುಖಂಡರು, ಮಹಿಳೆಯರು, ಯುವಕರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಮಲ್ಲಿನಮಡಗು, ಮದಾಪೂರ ಗ್ರಾಮಗಳಲ್ಲಿ ಸಾರ್ವಜನಿಕ ಗಣೇಶೋತ್ಸವಕ್ಕೆ ನಿಷೇಧ



ಮಾನ್ವಿ: ತಾಲೂಕಿನ ಮಲ್ಲಿನಮಡಗು ಮತ್ತು ಮದಾಪೂರ ಗ್ರಾಮಗಳಲ್ಲಿ ನಡೆದ ಪ್ರಕರಣಗಳಿಗೆ ಸಂಬಂಧಿಸಿದ ಆರೋಪಿತರು ಹಾಗೂ ಫಿರ್ಯಾದಿದಾರರ ನಡುವೆ ದ್ವೇಷದ ವಾತಾವರಣ ಇರುವ ಹಿನ್ನೆಲೆಯಲ್ಲಿ, ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಾರ್ವಜನಿಕ ಶಾಂತಿ ಕಾಪಾಡುವ ಉದ್ದೇಶದಿಂದ ಸೆ.13ರಿಂದ ಅ.13ರ ರಾತ್ರಿ 12 ಗಂಟೆಯವರೆಗೆ ಸಾರ್ವಜನಿಕವಾಗಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಹಾಗೂ ಮೆರವಣಿಗೆ ನಡೆಸುವುದನ್ನು ನಿಷೇಧಿಸಲಾಗಿದೆ.

ಕೋಮು ಸೌಹಾರ್ದತೆಗೆ ಧಕ್ಕೆ ಉಂಟಾಗುವ ಸಾಧ್ಯತೆ, ಗುಂಪು ಘರ್ಷಣೆ ನಡೆಯುವ ಸಂಭವ ಹಾಗೂ ಸಾರ್ವಜನಿಕ ಆಸ್ತಿ-ಪಾಸ್ತಿಗೆ ಹಾನಿಯಾಗುವ ಆತಂಕದ ಹಿನ್ನೆಲೆಯಲ್ಲಿ ಯಾವುದೇ ಸಂಘ-ಸಂಸ್ಥೆಗಳು ಅಥವಾ ಸಾರ್ವಜನಿಕರು ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಹಾಗೂ ಮೆರವಣಿಗೆ ನಡೆಸುವಂತಿಲ್ಲ ಎಂದು ಆದೇಶಿಸಲಾಗಿದೆ.

ಆದರೆ ಸಾರ್ವಜನಿಕರು ತಮ್ಮ ಸ್ವಂತ ಮನೆಗಳಲ್ಲಿ ಧಾರ್ಮಿಕ ಪೂಜೆ ನೆರವೇರಿಸಲು ಯಾವುದೇ ನಿರ್ಬಂಧ ಇರುವುದಿಲ್ಲ. ಧ್ವನಿವರ್ಧಕಗಳನ್ನು ಬಳಸಿ ಇತರರಿಗೆ ತೊಂದರೆ ಉಂಟುಮಾಡುವುದು ಅಥವಾ ಸಾರ್ವಜನಿಕ ಶಾಂತಿಗೆ ಭಂಗ ತರುವ ಚಟುವಟಿಕೆಗಳನ್ನು ನಡೆಸುವುದನ್ನು ನಿಷೇಧಿಸಲಾಗಿದೆ.

ಸದರಿ ಗ್ರಾಮಗಳ ವ್ಯಾಪ್ತಿಯಲ್ಲಿ ಮಾರಕಾಸ್ತ್ರಗಳು, ಕಲ್ಲು, ದೊಣ್ಣೆ ಸೇರಿದಂತೆ ಅಪಾಯಕಾರಿ ವಸ್ತುಗಳನ್ನು ಹಿಡಿದು ತಿರುಗಾಡುವುದು, ಪ್ರಚೋದನಕಾರಿ ಘೋಷಣೆ ಕೂಗುವುದು, ಕರಪತ್ರಗಳನ್ನು ಹಂಚುವುದು ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನಕಾರಿ ಸಂದೇಶಗಳನ್ನು ಪ್ರಸಾರ ಮಾಡುವುದನ್ನೂ ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ.

ಈ ಆದೇಶವನ್ನು ಉಲ್ಲಂಘಿಸುವ ಯಾವುದೇ ವ್ಯಕ್ತಿ ಅಥವಾ ಸಂಘ-ಸಂಸ್ಥೆಗಳ ವಿರುದ್ಧ ಭಾರತೀಯ ನ್ಯಾಯ ಸಂಹಿತೆ ಸೇರಿದಂತೆ ಅನ್ವಯವಾಗುವ ಇತರ ಕಾನೂನುಗಳ ಅಡಿಯಲ್ಲಿ ಸೂಕ್ತ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುವುದು ಎಂದು ತಹಶೀಲ್ದಾರ್ ಹಾಗೂ ತಾಲೂಕು ಕಾರ್ಯನಿರ್ವಾಹಕ ದಂಡಾಧಿಕಾರಿ ಭೀಮರಾಯ ಬಿ. ರಾಮಸಮುದ್ರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾನಪದ ಸಾಹಿತ್ಯ ಉಳಿಸಿ ಬೆಳೆಸಲು ಮಹಿಳೆಯರ ಪಾತ್ರ ಮಹತ್ವದ್ದು: ಡಾ. ಎಸ್. ಬಾಲಾಜಿ



ರಾಯಚೂರು: ಎಲ್ಲಾ ಸಾಹಿತ್ಯಗಳಿಗೂ ಮೂಲವಾಗಿರುವ ಜಾನಪದ ಸಾಹಿತ್ಯವನ್ನು ಉಳಿಸಿ ಬೆಳೆಸುವಲ್ಲಿ ಮಹಿಳೆಯರ ಕೊಡುಗೆ ಅಪಾರವಾಗಿದೆ. ವಿಶೇಷವಾಗಿ ಗ್ರಾಮೀಣ ಮಹಿಳೆಯರು ಜನಪದ ಸಾಹಿತ್ಯವನ್ನು ಕಟ್ಟಿ ಬೆಳೆಸಿ, ಒಂದು ತಲೆಮಾರಿನಿಂದ ಮತ್ತೊಂದು ತಲೆಮಾರಿಗೆ ಸಾಗಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದು ಕನ್ನಡ ಜಾನಪದ ಪರಿಷತ್ತಿನ ರಾಜ್ಯಾಧ್ಯಕ್ಷ ಡಾ. ಎಸ್. ಬಾಲಾಜಿ ಹೇಳಿದರು.

ನಗರದ ಕರ್ನಾಟಕ ಸಂಘದಲ್ಲಿ ಕನ್ನಡ ಜಾನಪದ ಪರಿಷತ್ ಬೆಂಗಳೂರು, ಕನ್ನಡ ಜಾನಪದ ಪರಿಷತ್ ರಾಯಚೂರು ಜಿಲ್ಲಾ ಘಟಕ ಹಾಗೂ ಮಹಿಳಾ ಘಟಕದ ಸಂಯುಕ್ತಾಶ್ರಯದಲ್ಲಿ ಶನಿವಾರ ಸಂಜೆ ಆಯೋಜಿಸಿದ್ದ ಮಹಿಳಾ ಘಟಕದ ಪದಗ್ರಹಣ ಸಮಾರಂಭ ಹಾಗೂ ವಿಶ್ವ ಜಾನಪದ ಬುಡಕಟ್ಟು ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ನಿವೃತ್ತ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಆರ್. ಇಂದಿರಾ, ಜನಪದ ಸಾಹಿತ್ಯವು ಬದುಕಿನ ಸಾಹಿತ್ಯವಾಗಿದ್ದು, ಅತ್ಯಂತ ಸರಳವಾಗಿ ಮೂಡಿಬಂದಿರುವ ಈ ಸಾಹಿತ್ಯ ಪ್ರತಿಯೊಬ್ಬರ ಮನಸ್ಸಿಗೆ ಹತ್ತಿರವಾಗುತ್ತದೆ. ಭಾರತದ ಸಂಸ್ಕೃತಿ ಹಾಗೂ ಪರಂಪರೆಯನ್ನು ತಿಳಿಸುವ ಶಕ್ತಿ ಇದಕ್ಕಿದೆ. ಆದರೆ ಪ್ರಸ್ತುತ ಜನಪದ ಕಲೆಗಳು ಮರೆಯಾಗುತ್ತಿರುವುದು ವಿಷಾದನೀಯ ಎಂದರು.

ಇಂದಿನ ಯುವಕರು ಪಾಶ್ಚಿಮಾತ್ಯ ಸಂಸ್ಕೃತಿಗೆ ಮಾರು ಹೋಗಿ ನಮ್ಮ ಮೂಲ ಸಾಹಿತ್ಯವನ್ನು ಮರೆಯುತ್ತಿದ್ದಾರೆ. ಜನಪದ ಸಾಹಿತ್ಯದಲ್ಲಿ ಮಾನವೀಯ ಮೌಲ್ಯಗಳು ಹಾಗೂ ಸಮೃದ್ಧ ಕಲೆ ಅಡಕವಾಗಿದ್ದು, ಯುವಕರು ಅದನ್ನು ಅಳವಡಿಸಿಕೊಳ್ಳಬೇಕು. ಮಹಿಳಾ ಘಟಕವು ಜನಪದ ಕಲೆಗಳನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ನಿರಂತರವಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಹಿರಿಯ ಸಾಹಿತಿ ಅಯ್ಯಪ್ಪಯ್ಯ ಹುಡಾ ಮಾತನಾಡಿ, ಕನ್ನಡ ಜಾನಪದ ಪರಿಷತ್ತಿನ ಮಹಿಳಾ ಘಟಕ ಉತ್ತಮ ಸಂಘಟನೆಯಾಗಿ ಬೆಳೆಯುತ್ತಿದ್ದು, ರಾಯಚೂರು ಜಿಲ್ಲೆಯಲ್ಲಿಯೇ ಮಾದರಿ ಸಂಘಟನೆಯಾಗಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕನ್ನಡ ಜಾನಪದ ಪರಿಷತ್ತಿನ ವಿಭಾಗೀಯ ಸಂಚಾಲಕ ಡಾ. ಶರಣಪ್ಪ ಗೋನಾಳ್ ಮಾತನಾಡಿ, ಮಹಿಳಾ ಘಟಕದ ವತಿಯಿಂದ ಈಗಾಗಲೇ ರಾಯಚೂರಿನಲ್ಲಿ ಪ್ರಥಮ ಮಹಿಳಾ ಜಾನಪದ ಸಮ್ಮೇಳನವನ್ನು ಅದ್ದೂರಿಯಾಗಿ ಆಯೋಜಿಸಲಾಗಿದೆ. ಪದಗ್ರಹಣಗೊಂಡಿರುವ ಜಿಲ್ಲಾ ಮಹಿಳಾ ಘಟಕದ ವತಿಯಿಂದ ಮುಂದಿನ ದಿನಗಳಲ್ಲಿ ವಿಭಾಗ ಮಟ್ಟದ ಸಮ್ಮೇಳನ ಆಯೋಜಿಸಲು ಯೋಜನೆ ರೂಪಿಸಲಾಗುವುದು ಎಂದು ತಿಳಿಸಿದರು.

ನಿಯೋಜಿತ ಮಹಿಳಾ ಘಟಕದ ಅಧ್ಯಕ್ಷೆ ರೇಖಾ ಕೇಶವರೆಡ್ಡಿ ಮಾತನಾಡಿ, ಎಲ್ಲರ ಸಹಕಾರದೊಂದಿಗೆ ಮಹಿಳಾ ಘಟಕದ ಮೂಲಕ ಜಾನಪದ ಕಲೆ ಹಾಗೂ ಸಂಸ್ಕೃತಿಯನ್ನು ನಿರಂತರವಾಗಿ ಬೆಳೆಸಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗೌರವ ಸಲಹೆಗಾರ್ತಿ ದಾನಮ್ಮ ಟಿ. ಸುಭಾಷ್, ಹಿರಿಯ ಸಾಹಿತಿ ಮಂಗಳ ಸಕ್ರಿ, ಪ್ರಧಾನ ಕಾರ್ಯದರ್ಶಿ ದಂಡಪ್ಪ ಬಿರಾದಾರ್, ಜಂಟಿ ಕಾರ್ಯದರ್ಶಿ ಮುರಳಿಧರ ಕುಲಕರ್ಣಿ ಸೇರಿದಂತೆ ಹಲವರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಜನಪದ ಕ್ಷೇತ್ರದಲ್ಲಿ ಸಾಧನೆ ಮಾಡಿದ ಶಾಂತ ಕುಲಕರ್ಣಿ ಅವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು.

ಜಾನ್ಸಿ ರಾಣಿ ಹಾಗೂ ಶೈಲಜಾ ಅವರ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಆರಂಭವಾಯಿತು. ವೀಣಾ ತೋರದಾಳ್ ಸ್ವಾಗತಿಸಿದರು. ಪ್ರಧಾನ ಕಾರ್ಯದರ್ಶಿ ಪ್ರತಿಭಾ ಗೋನಾಳ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ವಸುಂಧರಾ ಪಾಟೀಲ್ ಕಾರ್ಯಕ್ರಮ ನಿರೂಪಿಸಿದರು.

ಮಹಿಳಾ ಘಟಕದ ಗೌರವಾಧ್ಯಕ್ಷರಾಗಿ ವಿಜಯರಾಜೇಶ್ವರಿ ಗೋಪಿ ಶೆಟ್ಟಿ, ಅಧ್ಯಕ್ಷರಾಗಿ ರೇಖಾ ಕೇಶವರೆಡ್ಡಿ, ಪ್ರಧಾನ ಕಾರ್ಯದರ್ಶಿಯಾಗಿ ಪ್ರತಿಭಾ ಗೋನಾಳ್, ಖಜಾಂಚಿಯಾಗಿ ಡಾ. ವಸುಂಧರಾ ಪಾಟೀಲ್, ಜಂಟಿ ಕಾರ್ಯದರ್ಶಿಯಾಗಿ ವೀಣಾ ತೋರದಾಳ್, ಸಂಘಟನಾ ಕಾರ್ಯದರ್ಶಿಯಾಗಿ ಅಶ್ವಿನಿ ಸಂತೋಷ್, ಪತ್ರಿಕಾ ಕಾರ್ಯದರ್ಶಿಯಾಗಿ ದೇವೇಂದ್ರಮ್ಮ, ಸಂಚಾಲಕರಾಗಿ ಪದ್ಮಾವತಿ ನಾಯಕ, ಸಹ ಸಂಚಾಲಕರಾಗಿ ಛಾಯಾದೇವಿ ಕೋಳೂರು ಹಾಗೂ ಸದಸ್ಯ ಸಂಚಾಲಕರಾಗಿ ನಿವೇದಿತಾ, ಚಾಗಿ ನಿರ್ಮಲ, ಮಾಲತಿ, ಎಂ.ಆರ್. ಸುನೀತಾ ಮತ್ತು ಶೈಲಜಾ ಶಾವಂತಿಗೆರ ಅವರು ಅಧಿಕಾರ ಸ್ವೀಕರಿಸಿದರು.

ಕೊನೆಯಲ್ಲಿ ಪ್ರತಿಭಾ ಗೋನಾಳ್ ವಂದಿಸಿದರು.

# ಮುಸ್ಲಿಂ ಸಮುದಾಯಕ್ಕೆ ಸೂಕ್ತ ಸ್ಥಾನಮಾನ ನೀಡಲು ಹುಸೇನ್ ಬಾಷಾ ಒತ್ತಾಯ




ಲಿಂಗಸುಗೂರು: ತಾಲೂಕಿನ ಮುಸ್ಲಿಂ ಸಮುದಾಯವು ಹಲವು ದಶಕಗಳಿಂದ ಕಾಂಗ್ರೆಸ್ ಪಕ್ಷದ ಸಂಘಟನೆ ಹಾಗೂ ಸಾರ್ವಜನಿಕ ಬದುಕಿನಲ್ಲಿ ನಿಷ್ಠೆಯಿಂದ ದುಡಿಯುತ್ತಾ ಬಂದಿದ್ದರೂ, ಜನಸಂಖ್ಯೆ ಮತ್ತು ಅರ್ಹತೆಗೆ ಅನುಗುಣವಾಗಿ ಪಕ್ಷದ ಹುದ್ದೆಗಳು, ನಿಗಮ-ಮಂಡಳಿಗಳು, ಪ್ರಾಧಿಕಾರಗಳು ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಸಮರ್ಪಕ ಪ್ರಾತಿನಿಧ್ಯ ದೊರೆಯುತ್ತಿಲ್ಲ ಎಂದು ಅಂಜುಮನ್-ಎ-ಮುಸ್ಲಿಮೀನ್ ತಾಲೂಕು ಸಮಿತಿ ಅಧ್ಯಕ್ಷ ಹುಸೇನ್ ಬಾಷಾ ಅಸಮಾಧಾನ ವ್ಯಕ್ತಪಡಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲಿಂಗಸುಗೂರು ತಾಲೂಕಿನಲ್ಲಿ ಗ್ರಾಮೀಣ ಹಾಗೂ ಪಟ್ಟಣ ಪ್ರದೇಶ ಸೇರಿ ಸುಮಾರು 65 ಸಾವಿರ ಜನಸಂಖ್ಯೆ ಹೊಂದಿರುವ ಮುಸ್ಲಿಂ ಸಮುದಾಯವನ್ನು ನಿರಂತರವಾಗಿ ಕಡೆಗಣಿಸುವುದು ಸರಿಯಲ್ಲ ಎಂದು ಹೇಳಿದರು.

ಚುನಾವಣೆ ಹಾಗೂ ಪಕ್ಷದ ಬೆಂಬಲದ ಸಂದರ್ಭದಲ್ಲಿ ಸಮುದಾಯವನ್ನು ನೆನಪಿಸಿಕೊಳ್ಳಲಾಗುತ್ತದೆ. ಆದರೆ ಅಧಿಕಾರ ಮತ್ತು ಜವಾಬ್ದಾರಿಯ ಅವಕಾಶಗಳು ಬಂದಾಗ ಕಡೆಗಣಿಸಲಾಗುತ್ತಿದೆ. ಹಲವು ವರ್ಷಗಳಿಂದ ನಿಷ್ಠೆಯಿಂದ ದುಡಿದ ಸಮರ್ಥರು ಸಮುದಾಯದಲ್ಲಿದ್ದು, ಯಾವುದೇ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುವ ಅರ್ಹತೆ ಹೊಂದಿದ್ದಾರೆ ಎಂದು ತಿಳಿಸಿದರು.

ಲಿಂಗಸುಗೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸ್ಥಾನ ಸೇರಿದಂತೆ ಮುಂಬರುವ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸ್ಥಾನಕ್ಕೂ ಅರ್ಹತೆ, ಅನುಭವ ಮತ್ತು ಪಕ್ಷನಿಷ್ಠೆಯನ್ನು ಪರಿಗಣಿಸಿ ಮುಸ್ಲಿಂ ಸಮುದಾಯದವರಿಗೆ ಸೂಕ್ತ ಅವಕಾಶ ನೀಡಬೇಕು ಎಂದು ಒತ್ತಾಯಿಸಿದರು.

ಕೇವಲ ಭರವಸೆ ನೀಡುತ್ತಾ ಸಮುದಾಯವನ್ನು ನಿರ್ಲಕ್ಷಿಸುವ ಧೋರಣೆ ಮುಂದುವರಿಯಬಾರದು. ಈ ಬಾರಿಯೂ ಉನ್ನತ ಹುದ್ದೆಗಳಲ್ಲಿ ಸಮುದಾಯಕ್ಕೆ ಅವಕಾಶ ನೀಡದಿದ್ದರೆ, ಮುಂಬರುವ ಚುನಾವಣೆಗಳಲ್ಲಿ ಮುಸ್ಲಿಂ ಸಮುದಾಯ ಒಗ್ಗಟ್ಟಿನಿಂದ ಸೂಕ್ತ ನಿರ್ಧಾರ ಕೈಗೊಳ್ಳಲಿದೆ ಎಂದು ಎಚ್ಚರಿಸಿದರು.

"ನಮ್ಮ ನಿಷ್ಠೆಯನ್ನು ದೌರ್ಬಲ್ಯವೆಂದು ಪರಿಗಣಿಸಬಾರದು. ನಮ್ಮ ಹಕ್ಕು ಮತ್ತು ಸೂಕ್ತ ಪ್ರಾತಿನಿಧ್ಯ ನಮಗೆ ದೊರೆಯಬೇಕು" ಎಂದು ಹುಸೇನ್ ಬಾಷಾ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಜೆ. ಬಾಬು, ದಾದಾಪೀರ್, ಖಾಸಿಂಸಾಬ್, ಮಹ್ಮದ್ ರಫಿ, ಶೇಖ್ ಅಲಿ, ರೆಹಮಾನ್, ಮಹ್ಮದ್ ಇರ್ಫಾನ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K